ಸಂಪಾದಕರು: ರವಿಕುಮಾರ್ ಸಿ.ಹೆಚ್.
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYAPRAGATHI Kannada Daily
ಪ್ರತಿ ಸುದ್ದಿಯ ಧ್ವನಿ

suryapragathi2021@gmail.com Mob: 9901010109 RNI:KARKAN/2021/80805 L2/RNP-1285/TMR/2025-27

Volume: 05 ಸಂಪುಟ: 05 | Issue:81 ಸಂಚಿಕೆ: 81 | Date:10-04-2026 Friday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

## ಗಂಡ ಹೆಂಡತಿ ನಡುವೆ ಜಗಳ ಪತ್ನಿಗೆ ಮಚ್ಚಿನೇಟು ನೀಡಿ ಪತಿ ಆತ್ಮಹತ್ಯೆ



ತುಮಕೂರು, ವಿಚ್ಛೇದನ ಬಯಸಿದ ಪತ್ನಿಗೆ ಪತಿ ಮಚ್ಚಿನೇಟು ಕೊಟ್ಟು ಬಳಿಕ ತಾನೂ ಆತ್ಮಹತ್ಯೆಗೆ ಶರಣಾಗಿರುವ ಘಟನೆ ತುಮಕೂರು ಜಿಲ್ಲೆ ಕೊರಟಗೆರೆ ತಾಲ್ಲೂಕಿನ ಕೋಟೆಯಲ್ಲಿ ನಡೆದಿದೆ. ದಂಪತಿ ನಡುವೆ ಗಲಾಟೆಯಾಗಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಪತಿಯ ಮಚ್ಚಿನೇಟಿನಿಂದ ಗಾಯಗೊಂಡಿರುವ ಪತ್ನಿ ನಾಗಮಣಿ ಸಾವು ಬದುಕಿನ ಮಧ್ಯೆ ಆಸ್ಪತ್ರೆಯಲ್ಲಿ ಹೋರಾಟ ನಡೆಸುತ್ತಿದ್ದರೆ, ಮತ್ತೊಂದೆಡೆ ಪತಿ ಮಾರುತಿ, ಕೊರಟಗೆರೆ ತಾಲ್ಲೂಕಿನ ದೊಡ್ಡನಹಳ್ಳಿಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಮೈಸೂರಿನ ಸರ್ಕಾರಿ ಆಸ್ಪತ್ರೆಯ ನರ್ಸ್ ಆಗಿರುವ ನಾಗಮಣಿ ಹಾಗೂ ಮಾರುತಿ ಕಳೆದ 15 ವರ್ಷದ ಹಿಂದೆ ಪ್ರೀತಿಸಿ ಮದುವೆಯಾಗಿದ್ದು, ಈ ದಂಪತಿಗೆ ಎರಡು ಮಕ್ಕಳು ಸಹ ಇವೆ. ಮಾರುತಿ ವೃತ್ತಿಯಲ್ಲಿ ಗಾರೆ ಕೆಲಸ ಮಾಡಿಕೊಂಡಿದ್ದರೆ, ನಾಗಮಣಿಗೆ ಮದುವೆ ನಂತರ ಸರ್ಕಾರಿ ನರ್ಸ್ ಕೆಲಸ ಸಿಕ್ಕಿತ್ತು. ಆದ್ರೆ, ಯಾವಾಗ ನಾಗಮಣಿಗೆ ಸರ್ಕಾರಿ ನರ್ಸ್ ಕೆಲಸ ಒಲಿದು ಬಂತೋ ಅಂದಿನಿಂದ ಆಕೆಯ ಜೀವನ ಶೈಲಿಯೇ ಬದಲಾಗಿದ್ದು, ಗಾರೆ ಕೆಲಸ ಮಾಡಿ ಕೊಂಡಿದ್ದ ಪತಿ ಮಾರುತಿಯಿಂದ ನಾಗಮಣಿ ವಿವಾಹ ವಿಚ್ಛೇದನ ಪಡೆದು ಕೊಳ್ಳಲು ಚಿಂತನೆ ನಡೆಸಿದ್ದಳು.

ಇನ್ನೊಂದೆಡೆ ನಾಗಮಣಿಗೆ ಮತ್ತೊಬ್ಬನ ಜೊತೆ ಸಂಬಂಧ ಇರುವ ಬಗ್ಗೆ ಮಾರುತಿಗೆ ಅನುಮಾನ ಬಂದಿದ್ದು, ಇದೇ ವಿಚಾರವಾಗಿ ಗಲಾಟೆ ಮಾಡಿದ್ದ. ಅಲ್ಲದೇ ಈ ಗಂಡ ಹೆಂಡತಿ ಜಗಳ ಮೈಸೂರಿನ ಸ್ಥಳೀಯ ಠಾಣೆ ಮೆಟ್ಟಿಲೇರಿತ್ತು. ಇದಾದ ಬಳಿಕ ಮೊನ್ನೆ ಗಂಡನ ಜೊತೆ ಕೋಟೆಯಲ್ಲಿ ವಾಸವಾಗಿದ್ದ ಮಕ್ಕಳ ನೋಡಲು ನಾಗಮಣಿ ಬಂದಿದ್ದಳು. ಈ ವೇಳೆ ದಂಪತಿ ನಡುವೆ ಮತ್ತೆ ಗಲಾಟೆಯಾಗಿದ್ದು, ಈ ಸಂದರ್ಭದಲ್ಲಿ ಮಾರುತಿ, ಮಚ್ಚಿನಿಂದ ನಾಗಮಣಿ ಮೇಲೆ ಹಲ್ಲೆ ಮಾಡಿ ಪರಾರಿಯಾಗಿದ್ದಾನೆ. ಬಳಿಕ ಸ್ಥಳೀಯರು ಗಾಯಾಳು ನಾಗಮಣಿಯನ್ನು ಆಸ್ಪತ್ರೆಗೆ ದಾಖಲಿಸಿದ್ದು, ಸದ್ಯ ನಾಗಮಣಿ ಸಾವು ಬದುಕಿನ ನಡುವೆ ಹೋರಾಟ ನಡೆಸಿದ್ದಾಳೆ.

ಇನ್ನೊಂದೆಡೆ ಪತಿ ಮಾರುತಿ ಇಂದು ಕೊರಟಗೆರೆ ತಾಲ್ಲೂಕಿನ ದೊಡ್ಡನಹಳ್ಳಿಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ. ಘಟನೆ ಸಂಬಂಧ ಕೊರಟಗೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರೈಲು ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸುವುದು ಕೇಂದ್ರ ಸರ್ಕಾರದ ಉದ್ದೇಶ: ಎಚ್.ಡಿ. ಕುಮಾರಸ್ವಾಮಿ



ರಾಮನಗರ, : ರೈಲು ಪ್ರಯಾಣಿಕರ ಅನುಕೂಲಕ್ಕಾಗಿ ದೇಶದ ವಿವಿಧ ರೈಲು ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸಲಾಗುತ್ತಿದೆ, ಅದರಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಚನ್ನಪಟ್ಟಣ ತಾಲ್ಲೂಕಿನ ಶೆಟ್ಟಿಹಳ್ಳಿಯಲ್ಲಿ ಬೆಂಗಳೂರು – ಮೈಸೂರು ರೈಲ್ವೆ ಮಾರ್ಗದಲ್ಲಿ ಕೈಗೊಳ್ಳಲಾಗಿರುವ ಕಾಮಗಾರಿಗಳ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರಾದ ಎಚ್.ಡಿ. ಕುಮಾರಸ್ವಾಮಿ ಅವರು ತಿಳಿಸಿದರು.

ಅವರು ಏ.9ರ ಗುರುವಾರ ಬೆಂಗಳೂರಿನ ಕೆ.ಎಸ್.ಆರ್. ಬೆಂಗಳೂರು–ಮಂಡ್ಯ ನಡುವಿನ ರೈಲು ಮಾರ್ಗದ ವಿಂಡೋ ಟ್ರೈಲಿಂಗ್ ತಪಾಸಣೆ ನಡೆಸಿ, ಮಾರ್ಗ ಮಧ್ಯೆ ಬೆಂಗಳೂರು ದಕ್ಷಿಣ ಜಿಲ್ಲೆಯ ಚನ್ನಪಟ್ಟಣ ತಾಲ್ಲೂಕಿನ ಶೆಟ್ಟಿಹಳ್ಳಿ ರೈಲು ನಿಲ್ದಾಣವನ್ನು ಪರಿಶೀಲನೆ ಮಾಡಿ ವರದಿಗಾರರೊಂದಿಗೆ ಮಾತನಾಡಿದರು.

ಬೆಂಗಳೂರು – ಮೈಸೂರು ರೈಲ್ವೆ ಮಾರ್ಗದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ರೈಲ್ವೆ ಯೋಜನೆಗಳ ಅನುಕೂಲಕ್ಕಾಗಿ ಸಾರ್ವಜನಿಕರು ಸಲ್ಲಿಸಿರುವ ಅರ್ಜಿ ಸಂಬಂದ ಪ್ರಯಾಣಿಕರಿಗೆ ಅನುಕೂಲ ಮಾಡಲು ರೈಲ್ವೆ ಕಾಮಗಾರಿಗಳ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಹೇಳಿದರು.

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆಯ ರಾಜ್ಯ ಸಚಿವರಾದ ವಿ. ಸೋಮಣ್ಣ ಅವರು ಮಾತನಾಡಿ, ರೈಲಿನಲ್ಲಿ ಪ್ರಯಾಣಿಸುವ ಪ್ರಯಾಣಿಕರಿಗೆ ಹೆಚ್ಚಿನ ಆದ್ಯತೆ ನೀಡಲು ರೈಲು ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸಿ,ಅಗತ್ಯ ಮೂಲಭೂತ ಸೌಕರ್ಯ ಒದಗಿಸುವುದು ಕೇಂದ್ರ ಸರ್ಕಾರದ ಉದ್ದೇಶವಾಗಿದೆ ಎಂದರು.

ಮೇಲ್ಸೇತುವೆ, ಕೆಳಸೇತುವೆ ಕಾಮಗಾರಿ, ನಿಲ್ದಾಣಗಳಲ್ಲಿನ ಸ್ವಚ್ಛತೆ, ಪ್ರಯಾಣಿಕರಿಗೆ ಆಗುವ ತೊಂದರೆಗಳು, ಇತರೆ ಸಣ್ಣಪುಟ್ಟ ಸಮಸ್ಯೆಗಳನ್ನು ಪರಿಹರಿಸಲು ಕ್ರಮಹಿಸಲಾಗುತ್ತಿದೆ ಎಂದರು. ರೈಲ್ವೇ ಇಲಾಖೆಯ ಸೇವೆಗಳು ಬಡವರಿಗೆ ತಲುಪಬೇಕೆನ್ನುವ ನಿಟ್ಟಿನಲ್ಲಿ ಹಲವಾರು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂದರು.

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಎಸ್‌ಎಂಆರ್ ವೇಣುಗೋಪಾಲ್, ಸ್ಟೇಷನ್ ಮಾಸ್ಟರ್ ಸತ್ಯೇಂದ್ರ ಕುಮಾರ್, ರೈಲ್ವೆ ರಕ್ಷಣಾ ಬಲದ ಸಿಬ್ಬಂದಿ, ಸಿಗ್ನಲ್ ಟೆಲಿಕಾಂ ಸಿಬ್ಬಂದಿ, ಸಂಕೇತ ಮತ್ತು ಟೆಲಿಕಾಂ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಜನಗಣತಿಗೆ ಸಹಕರಿಸಿ: ಸಾರ್ವಜನಿಕರಿಗೆ ಶಾಸಕ ಸಿ.ಬಿ. ಸುರೇಶ್ ಬಾಬು ಕರೆ



ಚಿಕ್ಕನಾಯಕನಹಳ್ಳಿ: ಸರ್ಕಾರದ ಸೌಲಭ್ಯಗಳು ಪ್ರತಿಯೊಬ್ಬರಿಗೂ ತಲುಪಬೇಕಾದರೆ ನಿಖರವಾದ ಅಂಕಿ–ಅಂಶಗಳ ಅವಶ್ಯಕತೆಯಿದೆ. ಈ ಹಿನ್ನೆಲೆಯಲ್ಲಿ ನಡೆಯುತ್ತಿರುವ ಸ್ವಯಂ ಜನಗಣತಿ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಶಾಸಕ ಸಿ.ಬಿ. ಸುರೇಶ್ ಬಾಬು ಮನವಿ ಮಾಡಿದ್ದಾರೆ.

ಪಟ್ಟಣದ ತಿ ನಂ ಶ್ರೀ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ವಯಂ ಗಣತಿಯು ಏಪ್ರಿಲ್ 1 ರಿಂದ 15ರವರೆಗೆ ಸಾರ್ವಜನಿಕರು ಸ್ವತಃ ತಾವೇ ಮೊಬೈಲ್ ಮೂಲಕ ಗಣತಿ ಮಾಡಿಸಿಕೊಳ್ಳಲು ಅವಕಾಶವಿದೆ. ಏಪ್ರಿಲ್ 15ರಿಂದ ಮೇ 15ರವರೆಗೆ ಮನೆ–ಮನೆ ಸಮೀಕ್ಷೆಯು ಅಧಿಕಾರಿಗಳು ಪ್ರತಿಯೊಬ್ಬರ ಮನೆಬಾಗಿಲಿಗೆ ಬಂದು ನಡೆಸಲಿದ್ದಾರೆ. ಪ್ರತಿಯೊಬ್ಬ ನಾಗರಿಕರು ತಮ್ಮ ಕುಟುಂಬದ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿಯ ಬಗ್ಗೆ ಅಧಿಕಾರಿಗಳಿಗೆ ನಿಖರವಾದ ಮಾಹಿತಿಯನ್ನು ನೀಡಬೇಕು.

ಸರ್ಕಾರಿ ಸೌಲಭ್ಯಗಳಿಗೆ ಪೂರಕ ಯಾರು ಯಾವ ಸ್ಥಿತಿಯಲ್ಲಿ ಜೀವನ ನಡೆಸುತ್ತಿದ್ದಾರೆ, ಯಾರಿಗೆ ಯಾವ ಸೌಲಭ್ಯಗಳ ಅಗತ್ಯವಿದೆ ಎಂಬ ಮಾಹಿತಿ ಸರ್ಕಾರದ ಬಳಿ ಇದ್ದರೆ ಮಾತ್ರ ಸೂಕ್ತ ಕಾರ್ಯಕ್ರಮಗಳನ್ನು ರೂಪಿಸಲು ಸಾಧ್ಯವಾಗುತ್ತದೆ ಸರ್ಕಾರವು ಜನಗಣತಿಯನ್ನು ಅತ್ಯಂತ ಗೌಪ್ಯವಾಗಿ ಮತ್ತು ವ್ಯವಸ್ಥಿತವಾಗಿ ನಡೆಸುತ್ತಿದೆ. ಆದ್ದರಿಂದ ಎಲ್ಲಾ ವರ್ಗದ ಜನರು, ತಾವು ಯಾವ ಸಮಾಜಕ್ಕೆ ಸೇರಿದವರು ಮತ್ತು ನಿಮ್ಮ ಅಗತ್ಯತೆಗಳೇನು ಎಂಬ ವಾಸ್ತವ ಸಂಗತಿಯನ್ನು ಅಧಿಕಾರಿಗಳಿಗೆ ತಿಳಿಸುವ ಮೂಲಕ ಸರ್ಕಾರದ ಯೋಜನೆಗಳ ಲಾಭ ಪಡೆಯಲು ಸಹಕರಿಸಬೇಕು ಎಂದರು ..ಪತ್ರಿಕಾಗೋಷ್ಠಿಯಲ್ಲಿಯೇ ಸ್ವಯಂ ಡಿಜಿಟಲ್ ಗಣತಿಯಲ್ಲಿ ಶಾಸಕ ಸಿ ಬಿ ಸುರೇಶ್ ಬಾಬು ಭಾಗವಹಿಸಿ ತಮ್ಮ ವಿವಾರವನ್ನು ಅಪ್ಲೋಡ್ ಮಾಡಿದರು.

## ಪಿಯು ಪರೀಕ್ಷೆಯಲ್ಲಿ ಬಾಲಮಂದಿರ ಮಕ್ಕಳ ಸಾಧನೆ; ಮಕ್ಕಳ ರಕ್ಷಣಾಧಿಕಾರಿ ಶ್ಲಾಘನೆ




ತುಮಕೂರು: ತುಮಕೂರು ಜಿಲ್ಲೆಯ ಸರ್ಕಾರಿ ಬಾಲಮಂದಿರದ ಮಕ್ಕಳು ಈ ಬಾರಿ ನಡೆದ ಪಿಯು ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪವಿತ್ರ ತಿಳಿದ್ದಾರೆ.

ತುಮಕೂರು ಜಿಲ್ಲೆಯ ಸರ್ಕಾರಿ ಬಾಲಕಿಯರ ಬಾಲಮಂದಿರದ ಮಕ್ಕಳಾದ ಭಾಗ್ಯಲಕ್ಷ್ಮಿ 569 ಅಂಕಗಳನ್ನು ಪಡೆದು ವಾಣಿಜ್ಯ ವಿಭಾಗದಲ್ಲಿ ಹಾಗೂ ಚಿನ್ಮಯಿ 532 ಮತ್ತು ಚಂದನ 501 ಅಂಕಗಳನ್ನು ಪಡೆದು ವಿಜ್ಞಾನ ವಿಭಾಗದಲ್ಲಿ ಉತ್ತೀರ್ಣರಾಗಿರುತ್ತಾರೆ. ಸರ್ಕಾರಿ ಬಾಲಕರ ಬಾಲಮಂದಿರದ ರಂಗನಾಥ್ ವಿಜ್ಞಾನ ವಿಭಾಗದಲ್ಲಿ 362 ಅಂಕಗಳನ್ನು ಪಡೆದು ಉತ್ತೀರ್ಣರಾಗಿರುತ್ತಾರೆ. ದಯಾ ಭವನ ಮಕ್ಕಳ ಪಾಲನ ಸಂಸ್ಥೆಯಲ್ಲಿನ ಮಕ್ಕಳಾದ ನಯನ 424, ರಮೇಶ್ 384 ಮತ್ತು ಪ್ರೀತಂ 441 ಅಂಕಗಳನ್ನು ಪಡೆದು ವಿಜ್ಞಾನ ವಿಭಾಗದಲ್ಲಿ ಉತ್ತೀರ್ಣರಾಗಿರುತ್ತಾರೆ ಹಾಗೂ ಅಮಿತ್ 361, ನಿಖಿಲ್ 540, ಗುಂಡಪ್ಪ 311, ಗುರುಸ್ವಾಮಿ 311, ಶಶಿಧರ 418, ಪುಟ್ಟರಾಜು 332 ಅಂಕಗಳನ್ನು ಪಡೆದು ಕಲಾ ವಿಭಾಗದಲ್ಲಿ ಉನ್ನತ ಶ್ರೇಣಿಗಳಲ್ಲಿ ಉತ್ತೀರ್ಣರಾಗಿ ಪಾಲನಾ ಸಂಸ್ಥೆಗಳಿಗೆ ಕೀರ್ತಿ ತಂದಿದ್ದಾರೆ. ಸಂಸ್ಥೆಯ ಅಧೀಕ್ಷಕರುಗಳು ಹಾಗೂ ಸಿಬ್ಬಂದಿಗಳು ಮಕ್ಕಳು ಓದಿದ ಕಾಲೇಜುಗಳಿಗೆ ಧನ್ಯವಾದ ತಿಳಿಸಿದ್ದಾರೆ ಎಂದು ತಿಳಿಸಿದ್ದಾರೆ.

ಸರ್ಕಾರಿ ಬಾಲಮಂದಿರ ಮಕ್ಕಳ ಸಾಧನೆಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಡಾ.ಸಿದ್ದರಾಮಪ್ಪ ಅವರು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ ಎಂದು ಅವರು ತಿಳಿಸಿದ್ದಾರೆ.

## ಸರ್ಕಾರಿ ಹಣ ದುರುಪಯೋಗ ತಾ.ಪಂ ದ್ವಿತೀಯ ದರ್ಜೆ ಸಹಾಯಕಿ ಅಮಾನತ್ತು



ಮಧುಗಿರಿ : ತಾ.ಪಂ ದ್ವಿತೀಯ ದರ್ಜೆ ಸಹಾಯಕಿಯೊಬ್ಬರನ್ನು ಬರೋಬರಿ 4.28 ಕೋಟಿರೂಗಳ ಹಣದುರುಪಯೋಗ ಮಾಡಿಕೊಂಡಿರುವ ಆರೋಪದ ಮೇಲೆ ಅಮಾನತ್ತು ಮಾಡಲಾಗಿದೆ.

ಮಧುಗಿರಿ ತಾ.ಪಂ ನಲ್ಲಿ ದ್ವಿತೀಯ ದರ್ಜೆ ಸಹಾಯಕಿಯಾಗಿ ಕೆಲಸ ನಿರ್ವಹಿಸುತ್ತಿರುವ ಸೌಮ್ಯ ಒಟ್ಟು4,24,06,997 ರೂಗಳ ಹಣ ದುರುಪಯೋಗ ಆರೋಪದಡಿ ಅಮಾನತ್ತುಗೊಂಡವರು. ತಾಲೂಕು ಪಂಚಾಯಿತಿ, ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸಿ ನಿವೃತ್ತಿ ಹಾಗೂ ಸ್ವಯಂ ನಿವೃತ್ತಿ ಹೊಂದಿದ/ಮರಣ ಹೊಂದಿದ ಸರ್ಕಾರಿ ನೌಕರರ ಅಂತಿಮ ಗಳಿಕೆ ರಜೆಯನ್ನು ನಗಧೀಕರಣ ಮಂಜೂರಾತಿ ಮಾಡುವಲ್ಲಿ ಅಕ್ರಮವಾಗಿರುವ ಸಂಬಂಧ ಈ ಬಗ್ಗೆ ಹಲವಾರು ಬಾರಿ ವಿವಿಧ ಬ್ಯಾಂಕ್ ಖಾತೆಗಳಿಗೆ ಹಣ ವರ್ಗಾವಣೆ ಮಾಡಿರುವುದು ಕಂಡುಬಂದಿದ್ದು, ಖಜಾನೆ–2ರಲ್ಲಿ ನೌಕರರ ರೆಸಿಪಿಯಂಟ್ ಐ.ಡಿಯಲ್ಲಿನ ನೌಕರರ ಹೆಸರಿಗೂ ಹಣ ವರ್ಗಾವಣೆಯಾಗಿರುವ ಬ್ಯಾಂಕ್ ಖಾತೆದಾರರ ಹೆಸರಿಗೂ ವ್ಯತ್ಯಾಸವಿದ್ದು ಹಣದುರುಪಯೋಗವಾಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯತ್ ನಿಂದ ತನಿಖೆ ನಡೆಸಿದ್ದು, ತನಿಖಾ ತಂಡದವರು ವರದಿ ತನಿಖೆ ನಡೆಸಿ ರೂ.4,24,06,997/–ಗಳ ಹಣದುರುಪಯೋಗವಾಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ ಎಂದು ವರದಿ ನೀಡಿರುವ ಹಿನ್ನೆಲೆಯಲ್ಲಿ ಈ ಸಂಬಂಧ ಕರ್ತವ್ಯ ನಿರ್ವಹಿಸುತ್ತಿರುವ ಸೌಮ್ಯ ರವರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಹಾಗೂ ಇವರ ಸೇವೆಯನ್ನು ಇಲಾಖಾ ವಿಚಾರಣೆ ಕಾಯ್ದಿರಿಸಿ ಸೇವೆಯಿಂದ ಅಮಾನತ್ತುಗೊಳಿಸಲು ತೀರ್ಮಾನಿಸಲಾಗಿದೆ ಎಂದು ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ. ಅಶ್ವಿಜ ಆದೇಶ ಹೊರಡಿಸಿದ್ದಾರೆ.

ಮುಂದಿನ ಆದೇಶದವರೆಗೆ ಇಲಾಖಾ ವಿಚಾರಣೆ ಕಾಯ್ದಿರಿಸಿ ಅಮಾನತ್ತುಗೊಳಿಸಿದೆ. ಹಾಗೂ ಸೇವೆಯನ್ನು ಮಾತೃ ಇಲಾಖೆಗೆ ಹಿಂದುರಿಗಿಸಿದೆ. ಅಮಾನತ್ತಿನ ಅವಧಿಯಲ್ಲಿ ಸದರಿ ನೌಕರರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ 1957ರ ನಿಯಮ 98ರನ್ವಯ ಜೀವನಾಧಾರ ಭತ್ಯೆ ಪಡೆಯಲು ಅರ್ಹರಾಗಿರುತ್ತಾರೆ. ಹಾಗೂ ಅಮಾನತ್ತಿನ ಅವಧಿಯಲ್ಲಿ ಸದರಿ ನೌಕರರು ಸಕ್ಷಮ ಪ್ರಾಧಿಕಾರಿ ರವರ ಲಿಖಿತ ಅನುಮತಿ ಇಲ್ಲದೆ ಕೇಂದ್ರಸ್ಥಾನ ಬಿಡುವಂತಿಲ್ಲ ಎಂದು ಸೂಚಿಸಲಾಗಿದೆ.

ಮಧುಗಿರಿ ತಾ.ಪಂ ನಲ್ಲಿ ಹಿಂದೆಂದೂ ಇಷ್ಟೊಂದು ಅಕ್ರಮ ನಡೆದಿರಲ್ಲಿಲ್ಲ ಎನ್ನಬಹುದು

ಈ ಅಕ್ರಮ ಹಣ ದುರ್ಬಳಕೆ ಪ್ರಕರಣದ ಹಿಂದೆ ಇನ್ನೂ ಯಾರು ಯಾರು ಇದ್ದಾರೆ ಎಂಬುದನ್ನು ಜಿಲ್ಲಾ ಪಂಚಾಯ್ತಿ ಮೇಲಾದಿಕಾರಿಗಳು ತನಿಖೆ ನಡೆಸಿ ಈ ಹಗರಣದ ಹಿಂದಿರುವ ಕಾಣದ ಕೈಗಳನು ಹುಡುಕಿ ತೆಗೆಯಬೇಕಿದೆ

ಇದರ ಹಿಂದೆ ಯಾರು ಯಾರ ಕೈವಾಡ ಇದೆ ಎನ್ನುವ ಸತ್ಯ ಮಾತ್ರ ತನಿಖೆಯಿಂದ ಹೊರಬೀಳಲಿದೆ

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

## ಕೆಎಸ್ಆರ್‌ಟಿಸಿ ಬಸ್ಸಿನಲ್ಲಿ ಕಳೆದುಕೊಂಡ 30 ಗ್ರಾಂ. ಚಿನ್ನಾಭರಣ ವಾಪಸ್ ಮಧುಗಿರಿ ಪೊಲೀಸರು ಯಶಸ್ವಿ



ಮಧುಗಿರಿ: ಕೆಎಸ್ಆರ್‌ಟಿಸಿ ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದ ನೆರೆಯ ಆಂದ್ರಪ್ರದೇಶದ ಪ್ರಯಾಣಿಕರು ಕಳೆದುಕೊಂಡಿದ್ದ 30 ಗ್ರಾಂ ಚಿನ್ನಾಭರಣಗಳನ್ನು 12 ಗಂಟೆಗಳೊಳಗೆ ಸಂತ್ರಸ್ತರಿಗೆ ಹುಡುಕಿ ಕೊಡುವಲ್ಲಿ ಮಧುಗಿರಿ ಪೊಲೀಸರು ಯಶಸ್ವಿ ಯಾಗಿದ್ದಾರೆ.

ನೆರೆಯ ಆಂಧ್ರಮೂಲದ ದಂಪತಿ ಬೆಂಗಳೂರಿನಿಂದ ಕಲ್ಯಾಣ ದುರ್ಗಾಕ್ಕೆ ತೆರಳಲು ಕೆ ಎಸ್ ಆರ್ ಟಿ ಸಿ ಬಸ್ ಹತ್ತಿದ್ದರು. ಆದರೆ ಮಧ್ಯೆರಾತ್ರಿ ಮಧುಗಿರಿಯ ಬಸ್ ನಿಲ್ದಾಣದಲ್ಲಿ ಬಸ್ ನಲ್ಲಿಯೇ ಬ್ಯಾಗ್ ಬಿಟ್ಟು ಕೆಳಕಿಳಿದಿದ್ದರು. ನಂತರ ಬಸ್ ಮಧುಗಿರಿ ಬಿಟ್ಟು ಹೊರಟಾಗ ಬಸ್ ನಲ್ಲಿ ಬ್ಯಾಗ್ ಕಾಣೆಯಾಗಿತ್ತು. ರಾತ್ರಿಯ ವೇಳೆಯೇ ಪತಿ ಮಣಿಕಂಠ ಠಾಣೆಗೆ ಬಂದು ದೂರು ನೀಡಿದಾಗ ಕಾರ್ಯ ಪ್ರವೃತ್ತರಾದ ಪೊಲೀಸ್ ಸಿಬ್ಬಂದಿ ಮಧುಗಿರಿ ಬಸ್ ನಿಲ್ದಾಣದಲ್ಲಿ ಬಸ್ ನಿಂದ ಇಳಿದ ಪ್ರಯಾಣಿಕರ ಮಾಹಿತಿಯನ್ನು ಸ್ಥಳೀಯರಿಂದ ಪಡೆದು ನಂತರ ಮಧುಗಿರಿಯ ಶಂಕರ ಮಠದಲ್ಲಿ ನಡೆಯುತ್ತಿದ್ದ ಕಾರ್ಯಕ್ರಮದ ಕಡೆ ಗಮನಹರಿಸಿ ಬೆಂಗಳೂರಿನಿಂದ ಬಂದಂತಹ ಪ್ರಯಾಣಿಕರ ಲಗೇಜ್ ಬ್ಯಾಗ್ ಗಳನ್ನು ಪರಿಶೀಲಿಸಿದಾಗ ಆಂದ್ರ ಮೂಲದವರ ಬ್ಯಾಗ್ ಮತ್ತು ಅದರಲ್ಲಿದ್ದ ಒಡವೆಗಳು ಸಹ ಪತ್ತೆಯಾಗಿವೆ. ಕತ್ತಲೆಯ ಸಮಯದಲ್ಲಿ ಆಕಸ್ಮಿಕವಾಗಿ ಬ್ಯಾಗ್ ಬದಲಾಗಿ ತಂದಿರುವುದಾಗಿ ಕಾರ್ಯಕ್ರಮದಲ್ಲಿದ್ದವರು ತಿಳಿಸಿದ್ದಾರೆ.

ಪೊಲೀಸರ ಸಮಯ ಪ್ರಜ್ಞೆಯಿಂದಾಗಿ ಮಾಲೀಕರಿಗೆ ಆಭರಣಗಳನ್ನು 12 ಘಂಟೆಯೊಳಗೆ ಮರಳಿಸಿ ಪೊಲೀಸರು ಕರ್ತವ್ಯ ಪ್ರಜ್ಞೆ ಮೆರೆದಿದ್ದಾರೆ. ಈ ಕಾರ್ಯಾಚರಣೆಯಲ್ಲಿ ತಡರಾತ್ರಿ ಗಸ್ತಿನಲ್ಲಿದ್ದ ಠಾಣೆಯ ಎಸ್ ಐ ಚಂದ್ರಶೇಖರ್ ರವರ ಸೂಚನೆಯ ಮೇರೆಗೆ ಹೆಡ್ ಕಾನ್ಸ್ಟೇಬಲ್ ಮಲ್ಲಿಕಾರ್ಜುನ ರಾತ್ರಿ ಇಡೀ ಕಾರ್ಯಾಚರಣೆ ನಡೆಸಿದ್ದು.ಪಿ ಎಸ್ ಐ ಚಂದ್ರಶೇಖರ್ ಹಾಗೂ ಸಿಪಿಐ ಹನುಮಂತರಾಯಪ್ಪರವರುಗಳ ಮೆಚ್ಚಿಗೆ ಸೂಚಿಸಿದ್ದಾರೆ. ದಂಪತಿಗಳು ಸೇರಿದಂತೆ ಸಾರ್ವಜನಿಕರು ಪೊಲೀಸರ ಕಾರ್ಯವನ್ನು ಶ್ಲಾಘಿಸಿದ್ದಾರೆ.

## ಬಿಜೆಪಿ ವಿಷಸರ್ಪಎಂಬ ಖರ್ಗೆಹೇಳಿಕೆ ಬಿಜೆಪಿ ಆಕ್ರೋಶ : ಕ್ಷಮೆಯಾಚಿಸಲು ಶಾಸಕ ಜ್ಯೋತಿಗಣೇಶ್‌ಆಗ್ರಹ



ತುಮಕೂರು:ಬಿಜೆಪಿಹಾಗೂಆರ್‌ಎಸ್‌ಎಸ್‌ವಿಷಸರ್ಪಇದ್ದಂತೆಎಂದು ಹೇಳಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಹೇಳಿಕೆ ಖಂಡಿಸಿಜಿಲ್ಲಾ ಬಿಜೆಪಿಯಿಂದಗುರುವಾರ ನಗರದಲ್ಲಿ ಪ್ರತಿಭಟನೆ ನಡೆಯಿತು.ಖರ್ಗೆ ವಿರುದ್ಧಆಕ್ರೋಶ ವ್ಯಕ್ತಪಡಿಸಿದ ಬಿಜೆಪಿ ಮುಖಂಡರು ಹೇಳಿಕೆ ಹಿಂಪಡೆಯಲು ಒತ್ತಾಯಿಸಿದರು.

ಬಿಜಿಎಸ್ ವೃತ್ತದಲ್ಲಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಶಾಸಕ ಜಿ.ಬಿ. ಜ್ಯೋತಿಗಣೇಶ್, ಬಿಜೆಪಿ, ಆರ್‌ಎಸ್‌ಎಸ್ ವಿರುದ್ಧ ಅವಹೇಳನಾಕಾರಿಯಾಗಿ ಮಾತನಾಡಿರುವುದು ಮಲ್ಲಿಕಾರ್ಜುನಅವರಿಗೆ ಶೋಭೆಯಲ್ಲ.ದೇಶ ಮೊದಲು ಆಮೇಲೆ ಪಕ್ಷ ಹಾಗೂ ವ್ಯಕ್ತಿ ಎಂಬ ಧ್ಯೇಯದಆರ್‌ಎಸ್‌ಎಸ್ ಮಾರ್ಗದರ್ಶನದಲ್ಲಿ ಬಿಜೆಪಿ ಆಡಳಿತ ನಡೆಸುತ್ತಿದೆ.ಶಾಂತಿಪ್ರಿಯತೆಗೆ ಹೆಸರಾದ ಬೌದ್ಧಧರ್ಮ ಪ್ರತಿಪಾದಿಸುವಖರ್ಗೆಯವರು, ಅಲ್ಪಸಂಖ್ಯಾತರನ್ನು ಹಿಂದೂಗಳ ಮೇಲೆ ಎತ್ತಿಕಟ್ಟುವ ಮಾತುಗಳು ಆಕ್ಷೇಪಾರ್ಹ, ಅವರ ವಿರುದ್ಧ ಪ್ರಕರಣದಾಖಲಿಸಬೇಕು ಎಂದು ಬಿಜೆಪಿ ನಾಯಕರುಡಿಐಜಿ ಭೇಟಿ ಮಾಡಿದ್ದಾರೆ.ಖರ್ಗೆಅವರ ಮಾತುಗಳನ್ನು ಉಗ್ರವಾಗಿಖಂಡಿಸುತ್ತೇವೆ, ಅವರುತಮ್ಮ ಮಾತನ್ನು ವಾಪಸ್ ಪಡೆಯಬೇಕುಎಂದು ಒತ್ತಾಯಿಸಿದರು.

ಇಂದು ದೇಶದೇಶಗಳ ನಡುವೆಯುದ್ಧ ನಡೆಯುತ್ತಿದೆ.ಭಾರತ ಉಳಿದಿದೆಯೆಂದರೆ ಅದುಆರ್‌ಎಸ್‌ಎಸ್ ಹಾಕಿಕೊಟ್ಟ ಮಾರ್ಗದರ್ಶನ, ಪ್ರಧಾನಿ ನರೇಂದ್ರ ಮೋದಿಯವರಆಡಳಿತದಿಂದ ಮಾತ್ರ.ಬೇರೆ ಪಕ್ಷಗಳಾಗಿದ್ದರೆ ಅಧಿಕಾರಕ್ಕೋಸ್ಕರದೇಶದ ಭದ್ರತೆಯನ್ನೂಕಡೆಗಣಿಸುತ್ತಿದ್ದವು.ಆರ್‌ಎಸ್‌ಎಸ್ ಹಾಕಿಕೊಟ್ಟ ಬುನಾದಿಯ ಆಡಳಿತದಲ್ಲಿ ಇಂದು ನಮ್ಮದೇಶ ಸುಭದ್ರವಾಗಿದೆ.ಅದನ್ನು ಸಹಿಸಲಾಗದೆಮಲ್ಲಿಕಾರ್ಜುನಖರ್ಗೆಯವವರುದೇಶಒಡೆಯುವ ಹೇಳಿಕೆ ನೀಡಿರುವುದುಖಂಡನೀಯ.ಅವರುದೇಶದಜನರಕ್ಷಮೆ ಕೇಳಬೇಕು ಎಂದುಜ್ಯೋತಿಗಣೇಶ್ ಒತ್ತಾಯಿಸಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷಎಚ್.ಎಸ್. ರವಿಶಂಕರ್ ಹೆಬ್ಬಾಕ ಮಾತನಾಡಿ, ಅಲ್ಪಸಂಖ್ಯಾತರ ಓಲೈಕೆಗಾಗಿ ಮಲ್ಲಿಕಾರ್ಜುನಖರ್ಗೆಯವರುಆರ್‌ಎಸ್‌ಎಸ್, ಬಿಜೆಪಿಯನ್ನು ವಿಷಸರ್ಪಕ್ಕೆ ಹೋಲಿಕೆ ಮಾಡಿರುವುದುಖಂಡನೀಯ.ಬಿಜೆಪಿ ಯಾವತ್ತೂ ಮುಸ್ಲಿಮರನ್ನು ವಿರೋಧ ಮಾಡಿಲ್ಲ, ಯಾರೇ ಆಗಲಿ ದೇಶದ್ರೋಹಿಗಳನ್ನು ಸಹಿಸುವುದಿಲ್ಲ. ಮತ ಓಲೈಕೆಗಾಗಿ ಖರ್ಗೆಯವರು ಕೀಳುಮಟ್ಟದ ಹೇಳಿಕೆ ನೀಡುವುದನ್ನು ಬಿಡಬೇಕುಎಂದರು.

ಇಂತಹ ಹೇಳಿಕೆಗಳಿಂದಲೇ ದೇಶದಜನಕಾಂಗ್ರೆಸ್ ಪಕ್ಷವನ್ನುತಿರಸ್ಕರಿಸುತ್ತಾಕಾಂಗ್ರೆಸ್ ಮುಕ್ತ ದೇಶ ಮಾಡುತ್ತಿದ್ದಾರೆ. ಈಗ 22–23 ರಾಜ್ಯಗಳಲ್ಲಿ ಬಿಜೆಪಿ ಆಡಳಿತವಿದೆ.ಕಾಂಗ್ರೆಸ್ ಆಡಳಿತವಿರುವ ಕರ್ನಾಟಕವನ್ನುಕಾಂಗ್ರೆಸ್ ಪಕ್ಷಎಟಿಎಂ ಮಾಡಿಕೊಂಡಿದೆ.ಯಾವುದೇಅಭಿವೃದ್ಧಿ ಮಾಡದೆ, ತೆರಿಗೆ ಹೆಚ್ಚಳ ಮಾಡಿರುವರಾಜ್ಯಕಾಂಗ್ರೆಸ್ ಸರ್ಕಾರಕ್ಕೆರಾಜ್ಯದಜನತಕ್ಕ ಪಾಠ ಕಲಿಸುತ್ತಾರೆಎಂದರು.

ರಾಜ್ಯ ಬಿಜೆಪಿ ಕಾರ್ಯದರ್ಶಿ ಅಂಬಿಕಾ ಹುಲಿನಾಯ್ಕರ್, ನಿಕಟಪೂರ್ವ ನಗರಅಧ್ಯಕ್ಷ ಟಿ.ಹೆಚ್. ಹನುಮಂತರಾಜು, ಜಿಲ್ಲಾಯುವ ಮೋರ್ಚಾಅಧ್ಯಕ್ಷ ನವಚೇತನ್, ಒಬಿಸಿ ಮೋರ್ಚಾ ಅಧ್ಯಕ್ಷ ಕೆ.ವೇದಮೂರ್ತಿ, ಜಿಲ್ಲಾ ವಕ್ತಾರಟಿ.ಆರ್. ಸದಾಶಿವಯ್ಯ, ನಗರಪಾಲಿಕೆ ಮಾಜಿ ಸದಸ್ಯರಾದ ವಿಷ್ಣುವರ್ಧನ್, ಸಿ.ಎನ್.ರಮೇಶ್, ಮಲ್ಲಿಕಾರ್ಜುನ್, ಇಂದ್ರಕುಮಾರ್, ಮುಖಂಡರಾದ ಮನೋಹರಗೌಡ, ಮಹೇಶ್‌ಬಾಬು, ಜ್ಯೋತಿತಿಪ್ಪೇಸ್ವಾಮಿ, ಬಂಬೂ ಮೋಹನ್, ಜೆ.ಜಗದೀಶ್, ಹನುಮಂತರಾಜು, ನಿಸರ್ಗರಮೇಶ್, ಅಂಜನ್‌ಮೂರ್ತಿ, ವಸಂತಮ್ಮ, ಗಂಗಾಧರ್, ಪ್ರೀತಂಜೈನ್, ಕೊಪ್ಪಲ್ ನಾಗರಾಜು, ರೇಖಾ ಶಿವಕುಮಾರ್, ಲತಾಬಾಬು, ಮರಿತಿಮ್ಮಯ್ಯ, ವೆಂಕಟೇಶಾಚಾರ್, ಆಟೋಯಡಿಯೂರಪ್ಪ, ಪ್ರಸನ್ನಕುಮಾರ್, ಹರಿಪ್ರಸಾದ್,ದೇವರಾಜು ಮೊದಲಾದವರು

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಕಳೆದ 5 ವರ್ಷಗಳಲ್ಲಿ ರಾಜ್ಯದಲ್ಲಿ 114 ಭಾರಿ ಭೂಕಂಪ: ಉತ್ತರ ಕರ್ನಾಟಕ ಭಾಗದಲ್ಲೇ ಹೆಚ್ಚು

ಕಳೆದ 5 ವರ್ಷಗಳಲ್ಲಿ ಕರ್ನಾಟಕದಲ್ಲಿ 114 ಕಡಿಮೆ ತೀವ್ರತೆಯ ಭೂಕಂಪಗಳು ದಾಖಲಾಗಿವೆ. ಉತ್ತರ ಕರ್ನಾಟಕದ ವಿಜಯಪುರ, ಬೀದರ್, ಕಲಬುರಗಿ ಜಿಲ್ಲೆಗಳಲ್ಲಿ ಇವು ಹೆಚ್ಚು ಕೇಂದ್ರೀಕೃತವಾಗಿವೆ. ರಿಕ್ಟರ್ ಮಾಪಕದಲ್ಲಿ 3.0 ಕ್ಕಿಂತ ಕಡಿಮೆ ಇರುವ ಈ ಕಂಪನಗಳಿಗೆ ಪ್ರಮುಖ ಕಾರಣಗಳನ್ನು ತಜ್ಞರು ತಿಳಿಸಿದ್ದು, ಕಡಿಮೆ ತೀವ್ರತೆಯ ಭೂಕಂಪಗಳು ತಕ್ಷಣದ ಆತಂಕಕ್ಕೆ ಕಾರಣವಾಗುವುದಿಲ್ಲ. ಹೀಗಿದ್ದರೂ ಇವುಗಳ ಸಂಖ್ಯೆ ಅಥವಾ ತೀವ್ರತೆಯಲ್ಲಿ ಏರಿಕೆ ಕಂಡುಬಂದರೆ ವೈಜ್ಞಾನಿಕವಾಗಿ ಗಂಭೀರವಾಗಿ ಅಧ್ಯಯನ ಮಾಡಬೇಕೆಂದು ಎಚ್ಚರಿಸಲಾಗಿದೆ.

2021–2025ರ ಅವಧಿಯಲ್ಲಿ ಕಡಿಮೆ ತೀವ್ರತೆಯ ಭೂಕಂಪಗಳು ಕರ್ನಾಟಕದಲ್ಲಿ ದಾಖಲಾಗುತ್ತಿದ್ದು ವಿಶೇಷವಾಗಿ ಉತ್ತರ ಹಾಗೂ ಉತ್ತರ–ಪೂರ್ವ ಜಿಲ್ಲೆಗಳು ಇವುಗಳ ಕೇಂದ್ರವಾಗಿ ಹೆಚ್ಚು ಹೊರಹೊಮ್ಮಿವೆ ಎಂದು ಭೂ ವಿಜ್ಞಾನ ಸಚಿವಾಲಯವು ಲೋಕಸಭೆಯಲ್ಲಿ ನೀಡಿದ ಮಾಹಿತಿಯಲ್ಲಿ ತಿಳಿಸಿದೆ. ಕಳೆದ ಐದು ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ 114 ಘಟನೆಗಳು ಮಾತ್ರ ದಾಖಲಾಗಿವೆ. ವಿಜಯಪುರ, ಬೀದರ್ ಹಾಗೂ ಕಲಬುರಗಿ ಜಿಲ್ಲೆಗಳಲ್ಲಿ ಹೆಚ್ಚು ಕಂಪನಗಳು ದಾಖಲಾಗಿವೆ. ಆ ಪೈಕಿ ವಿಜಯಪುರದಲ್ಲಿಯೇ ಭೂಕಂಪನದ ಘಟನೆಗಳು ಹೆಚ್ಚಾಗಿ ನಡೆದಿವೆ ಎನ್ನಲಾಗಿದೆ.

2021ರಲ್ಲಿ 11, 2022ರಲ್ಲಿ 19, 2023ರಲ್ಲಿ 6, 2024ರಲ್ಲಿ 2 ಮತ್ತು 2025ರಲ್ಲಿ 7 ಭೂಕಂಪಗಳು ವಿಜಯಪುರದಲ್ಲಿ ದಾಖಲಾಗಿವೆ. ಬೀದರ್‌ನಲ್ಲೂ ಹಲವು ಬಾರಿ ಭೂಕಂಪನದ ಅನುಭವ ಆಗಿದ್ದು 2021 ಮತ್ತು 2022ರಲ್ಲಿ ತಲಾ 3, 2023ರಲ್ಲಿ 7, ನಂತರದ ವರ್ಷಗಳಲ್ಲಿ 2 ಮತ್ತು 3 ಘಟನೆಗಳು ದಾಖಲಾಗಿವೆ. 2021ರಲ್ಲಿ ಯಾವುದೇ ಕಂಪನವಾಗದ ಕಲಬುರಗಿಯಲ್ಲಿ 2023ರಲ್ಲಿ 5 ಮತ್ತು 2025ರಲ್ಲಿ 4 ಸಲ ಭೂಕಂಪದ ಅನುಭವ ಆಗಿದೆ. ಇತ್ತ ಬಳ್ಳಾರಿಯಲ್ಲಿ 2024ರಲ್ಲಿ ಅಚಾನಕ್ ಏರಿಕೆ ಕಂಡುಬಂದಿದ್ದು, 7 ಭೂಕಂಪಗಳು ದಾಖಲಾಗಿವೆ. ಮೈಸೂರು, ದಕ್ಷಿಣ ಕನ್ನಡ ಮತ್ತು ಕೋಲಾರ ಜಿಲ್ಲೆಗಳಲ್ಲಿ ಅತಿ ಕಡಿಮೆ ಅಥವಾ ವಿರಳ ಭೂಕಂಪ ಘಟನೆಗಳು ಮಾತ್ರ ವರದಿಯಾಗಿವೆ. ಸಚಿವಾಲಯ ನೀಡಿದ ಪಟ್ಟಿಯಲ್ಲಿ ಭೂಕಂಪ




ದಾಖಲಾಗಿದ 16 ಜಿಲ್ಲೆಗಳಷ್ಟೇ ಸೇರಿವೆ. ಉಳಿದ ಜಿಲ್ಲೆಗಳಲ್ಲಿ ಈ ಅವಧಿಯಲ್ಲಿ ಯಾವುದೇ ಗಮನಾರ್ಹ ಭೂಕಂಪ ದಾಖಲಾಗಿಲ್ಲ. ರಾಜ್ಯದಲ್ಲಿ ದಾಖಲಾಗಿರುವ ಬಹುತೇಕ ಭೂಕಂಪಗಳು ರಿಕ್ಟರ್ ಮಾಪಕದಲ್ಲಿ 3.0 ಕ್ಕಿಂತ ಕಡಿಮೆ ತೀವ್ರತೆ ಹೊಂದಿರುವ ಅಥವಾ ಸಣ್ಣ ಮಟ್ಟದವುಗಳಾಗಿವೆ. 3.0 ರಿಂದ 3.9 ನಡುವಿನವುಗಳು ಕಡಿಮೆ ಸಂಖ್ಯೆಯಲ್ಲಿ ಇದ್ದು, 4.0ಕ್ಕಿಂತ ಹೆಚ್ಚಿನವುಗಳು ವಿರಳವಾಗಿವೆ. 5.0 ಕ್ಕಿಂತ ಹೆಚ್ಚಿನ ಭೂಕಂಪಗಳು ಯಾವುದೇ ವರ್ಷದಲ್ಲೂ ದಾಖಲಾಗಿಲ್ಲ.

ಸುರತ್ಕಲ್‌ನ ಎನ್‌ಐಟಿಕೆ ನಾಗರಿಕ ಇಂಜಿನಿಯರಿಂಗ್ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಬಬ್ಲೂ ಚೌಧರಿ ಅವರು ಉತ್ತರ ಕರ್ನಾಟಕದಲ್ಲಿ ಹೆಚ್ಚು ಭೂಕಂಪ ಕಂಡುಬರುವುದಕ್ಕೆ ಮಳೆಗಾಲ ಹಾಗೂ ನಂತರದ ಅವಧಿಯಲ್ಲಿ ಉಂಟಾಗುವ ಹೈಡ್ರೋಸೀಸ್ಮಿಕ ಪ್ರತಿಕ್ರಿಯೆಗಳು ಮತ್ತು ದೊಡ್ಡ ಮಟ್ಟದ ಗಣಿಗಾರಿಕೆ ಚಟುವಟಿಕೆಗಳು ಕಾರಣವಾಗಿರಬಹುದು ಎಂದು ತಿಳಿಸಿದ್ದಾರೆ. 3.0 ಕ್ಕಿಂತ ಕಡಿಮೆ ತೀವ್ರತೆಯ ಭೂಕಂಪಗಳು ತಕ್ಷಣದ ಆತಂಕಕ್ಕೆ ಕಾರಣವಾಗುವುದಿಲ್ಲ ಎಂದರೂ, ಇವುಗಳ ಸಂಖ್ಯೆ ಅಥವಾ ತೀವ್ರತೆಯಲ್ಲಿ ಏರಿಕೆ ಕಂಡುಬಂದರೆ ವೈಜ್ಞಾನಿಕವಾಗಿ ಗಂಭೀರವಾಗಿ ಅಧ್ಯಯನ ಮಾಡಬೇಕೆಂದು ಅವರು ಎಚ್ಚರಿಕೆ ನೀಡಿರೋದಾಗಿ ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ.

### ಭೂಕಂಪ ಎಂದರೇನು?

ಸಾಮಾನ್ಯವಾಗಿ, ಸಹಜ ರೀತಿಯಲ್ಲಿ ಜನರಿಗೆ ತಿಳಿಯುವಂತೆ ಹೇಳಬೇಕು ಅಂದರೆ ಭೂಕಂಪ ಎಂದರೆ ಭೂಮಿ ಕಂಪಿಸುವುದು. ಆದರೆ ವೈಜ್ಞಾನಿಕವಾಗಿ ಹೇಳಬೇಕು ಅಂದರೆ ಭೂಮಿಯ ಎರಡು ಬ್ಲಾಕ್‌ಗಳು ಹಠಾತ್ತಾಗಿ ಒಂದರ ಹಿಂದೆ ಒಂದರಂತೆ ಜಾರಿದಾಗ ಸಂಭವಿಸುವುದು ಭೂಕಂಪ. ಭೂಕಂಪವು ಭೂಮಿಯ ಮೇಲ್ಮೈ ಅಲುಗಾಡುವಿಕೆಯಾಗಿದ್ದು, ಭೂಮಿಯ ಲಿಥೋಸ್ಪಿಯರ್‌ನಲ್ಲಿನ ಶಕ್ತಿಯ ಹಠಾತ್ ಬಿಡುಗಡೆಯ ಪರಿಣಾಮವಾಗಿ ಭೂಕಂಪನ ಅಲೆಗಳನ್ನು ಸೃಷ್ಟಿಸುತ್ತದೆ. ಜಾರಿಬೀಳುವ ಮೇಲ್ಮೈಯನ್ನು ದೋಷ ಅಥವಾ ದೋಷದ ಸಮತಲ ಎಂದು ಕರೆಯಲಾಗುತ್ತದೆ. ಭೂಕಂಪ ಅಥವಾ ಭೂಮಿಯ ಅದಿರಾಟ ಅಥವಾ ಹೊಯ್ದಾಡುವಿಕೆ ಎಂಬುದು ಭೂಮಿಯ ಹೊರಪದರದಲ್ಲಿ ಶಕ್ತಿಯು ಇದ್ದಕ್ಕಿದ್ದಂತೆ ಬಿಡುಗಡೆಯಾದಾಗ ಅದು ಉಂಟುಮಾಡುವ ಭೂಕಂಪದ ತರಂಗಗಳ ಪರಿಣಾಮ ಎನ್ನಬಹುದು. ಭೂಕಂಪಗಳನ್ನು ಭೂಕಂಪಮಾಪಕದ ಸಹಾಯದಿಂದ ದಾಖಲಿಸಲಾಗುತ್ತದೆ. ಇದಕ್ಕೆ ಭೂಕಂಪಲೇಖಿ (ಸೈಸ್ಮಗ್ರಾಫ್) ಎಂಬ ಹೆಸರೂ ಇದೆ.

### ಭೂಕಂಪ ಎಲ್ಲಿ ಆಗುತ್ತದೆ?

ಭೂಕಂಪಗಳು ಭೂಮಿಯ ಒಳಭಾಗದಲ್ಲಿ ಎಲ್ಲಿ ಬೇಕಾದರೂ ಸಂಭವಿಸುತ್ತವೆ. ಭೂಮಿಯ ಮೇಲೆ ಅತಿದೊಡ್ಡ ದೋಷದ ಮೇಲ್ಮೈಗಳನ್ನು ರೂಪಿಸುವ, ರೂಪಾಂತರದ ಅಥವಾ ಒಮ್ಮುಖವಾಗಿರುವ ಮಾದರಿಯ ಪದರದ ಗಡಿಯ ಸಂದರ್ಭದಲ್ಲಿ ಅವು ಪರಸ್ಪರ ಮೃದುವಾಗಿ ಭೂಕಂಪವುಂಟುಮಾಡದೆಯೇ ಹಾದುಹೋಗುತ್ತವೆ.

### ಭೂಕಂಪನ ಅಳೆಯುವ ರೀತಿ

ತೀವ್ರತೆ 3 ಅಥವಾ ಕಡಿಮೆ: ಇದನ್ನು ಸಾಮಾನ್ಯವಾಗಿ ಅನುಭವಿಸಲಾಗುವುದಿಲ್ಲ, ಆದರೆ ಇದೂ ದಾಖಲಾಗುತ್ತದೆ. ಇದು ಸಾಮಾನ್ಯವಾಗಿ ಹಾನಿಯನ್ನು ಉಂಮಾಡುವುದಿಲ್ಲ.

3 ರಿಂದ 6 ರವರೆಗೆ ತೀವ್ರತೆ: ಗಮನಾರ್ಹವಾಗಿದೆ. ಸಣ್ಣ ಹಾನಿ ಉಂಟುಮಾಡಬಹುದು.

ತೀವ್ರತೆ 6 ರಿಂದ 7: ಅವು ಇಡೀ ನಗರಕ್ಕೆ ಗಂಭೀರ



ಹಾನಿಯನ್ನುಂಟುಮಾಡುತ್ತವೆ.

ತೀವ್ರತೆ 7 ರಿಂದ 8: ಇದು ಹಾನಿ ಹೆಚ್ಚು ಮಾಡುತ್ತದೆ. ಇದು 150 ಕಿಲೋಮೀಟರ್‌ಗಿಂತ ಹೆಚ್ಚಿನ ಪ್ರದೇಶವನ್ನು ನಾಶಪಡಿಸುತ್ತದೆ.

8 ಡಿಗ್ರಿಗಿಂತ ಹೆಚ್ಚಿನ ಭೂಕಂಪನವು ಹಲವಾರು ಕಿಲೋಮೀಟರ್ ವ್ಯಾಪ್ತಿಯಲ್ಲಿ ಗಮನಾರ್ಹವಾದ ವಸ್ತು ಹಾನಿಯನ್ನುಂಟುಮಾಡುತ್ತದೆ. ಆದರೆ ನಮ್ಮ ದೇಶದಲ್ಲಿ ಈ ಪ್ರಮಾಣವನ್ನು ತಲುಪಿದ ಬಗ್ಗೆ ಯಾವುದೇ ದಾಖಲೆಗಳಿಲ್ಲ. 10ಕ್ಕಿಂತ ಜಾಸ್ತಿ

### ಭೂಕಂಪದ ಸಮಯದಲ್ಲಿ ಏನು ಮಾಡಬಹುದು?

ಮನೆಯೊಳಗೆ ಭಾರವಾದ ವಸ್ತುಗಳು, ಬಾಗಿಲುಗಳು ಮತ್ತು ಕಿಟಕಿಗಳಿಂದ ದೂರವಿರಿ. ಆದಷ್ಟು ಕಟ್ಟಡಗಳಿಲ್ಲದ ಬಯಲು ಪ್ರದೇಶಕ್ಕೆ ಹೋಗಲು ಪ್ರಯತ್ನಿಸಿ. ಅಂಡರ್‌ಪಾಸ್‌ಗಳು, ಕಟ್ಟಡಗಳು, ಮೇಲ್ಸೇತುವೆಗಳು, ಸೇತುವೆಗಳು ಇತ್ಯಾದಿಗಳ ಬಳಿ ನಿಮ್ಮ ವಾಹನವನ್ನು ನಿಲ್ಲಿಸುವುದನ್ನು ತಪ್ಪಿಸಿ.

### ಭೂಕಂಪದ ಸೂಚನೆ ಸಿಕ್ಕಾಗ ಏನು ಮಾಡಬೇಕು?

ಸಾಧ್ಯವಾದರೆ ನಿಮ್ಮ ಬಳಿಯಲ್ಲಿ ಪ್ರಥಮ ಚಿಕಿತ್ಸಾ ಕಿಟ್ ಅನ್ನು ಸಿದ್ಧವಾಗಿಡಿ. ನಿಮ್ಮ ಭದ್ರತೆಗಾಗಿ ಭೂಕಂಪ ಸುರಕ್ಷತಾ ಕಿಟ್‌ಗಳನ್ನು ಖರೀದಿಸಿ. ನೀವು ಗ್ಯಾಲನ್‌ಗಟ್ಟಲೆ ನೀರು, ಪೂರ್ವಸಿದ್ಧ ಆಹಾರ, ಧೂಳಿನ ಮಾಸ್ಕ್, ಟಾರ್ಚ್, ರೇಡಿಯೋ, ಪ್ರಥಮ ಚಿಕಿತ್ಸಾ ಕಿಟ್ ಇತ್ಯಾದಿಗಳನ್ನು ಇರಿಸಬಹುದಾದ ಆಶ್ರಯವನ್ನು ಪತ್ತೆ ಮಾಡಿ. ಭೂಕಂಪ ಪೀಡಿತ ಪ್ರದೇಶಗಳಲ್ಲಿ ಮನೆಯನ್ನು ಖರೀದಿಸುವುದು ಅಥವಾ ನಿರ್ಮಿಸುವುದನ್ನು ತಪ್ಪಿಸಿ. ಮನೆ ಕಟ್ಟುವ ಮುನ್ನ ನಿಮ್ಮ ಮನೆಯನ್ನು ಭೂಕಂಪ–ನಿರೋಧಕವಾಗಿ ಹೇಗೆ ಮಾಡಬಹುದು ಎಂಬುದನ್ನು ತಜ್ಞರಿಂದ ತಿಳಿದುಕೊಳ್ಳಿ.

# ಅಮೇರಿಕಾ, ಇಸ್ರೇಲ್ ಮತ್ತು ಇರಾನ್ ನಡುವೆ ಹದಿನೈದು ದಿನಗಳ ಕದನ ವಿರಾಮ

ಕದನ ವಿರಾಮ......

ಂಯುದ್ಧ ವಿರಾಮ ಘೋಷಣೆಯಾಗಿದೆ. ಸಾವಿರಾರು ಜನರ ಹತ್ಯೆಗಳ ನಂತರ, ಅಪಾರ ಪ್ರಮಾಣದ ಭೂಪ್ರದೇಶ, ನೈಸರ್ಗಿಕ ಸಂಪನ್ಮೂಲಗಳು, ತೈಲ ಘಟಕಗಳು ಮತ್ತು ಪರಿಸರವನ್ನು ನಾಶ ಮಾಡಿದ ನಂತರ, ಅತ್ಯಂತ ಉಪಯುಕ್ತ ಕಟ್ಟಡಗಳು, ಆಸ್ಪತ್ರೆ, ಶಾಲೆಗಳು ನಾಶವಾದ ನಂತರ,

### ಈ ಕದನ ವಿರಾಮ

ಸತ್ತವರನ್ನು ಮರಳಿ ತರುವುದೇ ?,
ಸತ್ತವರಿಗೆ ನ್ಯಾಯ ಕೊಡಿಸುವುದೇ ?
ಅಪಾರ ಪರಿಸರ ನಾಶಕ್ಕೆ ಹೊಣೆ ಯಾರು ?.....
ಅರ್ಥ ಮಾಡಿಕೊಳ್ಳಿ,
ಕೊನೆಗೂ ಗೆಲ್ಲುವುದು ಹಿಂಸೆಯಲ್ಲ ಅಹಿಂಸೆ,
ಕೊನೆಗೂ ಗೆಲ್ಲುವುದು ಸಂಧಾನವೇ ಹೊರತು ಸಂಘರ್ಷವಲ್ಲ,
ಕೊನೆಗೂ ಗೆಲ್ಲುವುದು ಪ್ರೀತಿಯೇ ಹೊರತು ದ್ವೇಷವಲ್ಲ....
ಸೇಡಿಗಿಂತ ಸಂಧಾನ ಅತ್ಯುತ್ತಮ,
ಸೇಡು ಶಾಪ, ಸಂಧಾನ ವರ....
ಕದನ ವಿರಾಮವೆಂಬ ಅಜ್ಞಾನದ ನಾಟಕ.....

ಸಾವಿರಾರು ಜನ ಸತ್ತು, ನೂರಾರು ಮಕ್ಕಳು, ಮಹಿಳೆಯರು ಗಾಯಗೊಂಡು, ಅನೇಕರು ಅನಾಥರಾದ ನಂತರ ಅಮೇರಿಕಾ, ಇಸ್ರೇಲ್ ಮತ್ತು ಇರಾನ್ ನಡುವೆ ಹದಿನೈದು ದಿನಗಳ ಕದನ ವಿರಾಮ ಘೋಷಣೆಯಾಗಿದೆ. ಆ ನಂತರ ಯುದ್ಧ ಮುಂದುವರಿಯುತ್ತದೆ ಅಥವಾ ಇನ್ನೊಂದಿಷ್ಟು ದಿನ ಕದನ ವಿರಾಮ ಜಾರಿಯಲ್ಲಿರಬಹುದು. ಇದೇ ಕೆಲಸವನ್ನು ಮೊದಲೇ ಮಾಡಿದ್ದರೆ ಸಾವಿರಾರು ಜನರ ಜೀವ ಉಳಿಯುತ್ತಿತ್ತಲ್ಲವೇ. ಮೂರೂ ದೇಶಗಳು ಇದರಿಂದ ಮಾಡಿದ ಸಾಧನೆಯಾದರು ಏನು. ಯುದ್ಧದಿಂದ ಎಲ್ಲಾ ಕಡೆ ಸಾವು ನೋವುಗಳೇ ಎಂಬುದು ತಿಳಿದಿಲ್ಲವೇ. ಮತ್ತೆ ಯುದ್ಧ ಮಾಡಿ, ಮುಂದೆ ಯಾವುದೋ ಒಂದು ದಿನ, ಯಾವುದೋ ಹಂತದಲ್ಲಿ ಒಪ್ಪಂದ ಮಾಡಿಕೊಂಡು ಯುದ್ಧ ನಿಲ್ಲುವುದು ಖಚಿತ.



ಆದರೆ ಅದು ಮಾಡಬಹುದಾದ ಘೋರ ದುರಂತವನ್ನು ಮರಳಿ ಸರಿಪಡಿಸುವುದು ಸಾಧ್ಯವೇ.....

ಇದೇ ಪ್ರಶ್ನೆ ರಷ್ಯಾ, ಉಕ್ರೇನ್ ಯುದ್ಧದ ಬಗ್ಗೆಯೂ ಏಳುತ್ತದೆ. ನಾಶದ ನಂತರ ಶರಣಾಗುವುದಕ್ಕಿಂತ ಮೊದಲೇ ಇದನ್ನು ಗ್ರಹಿಸಿ ಸ್ವಲ್ಪ ಹೊಂದಾಣಿಕೆಯ ಒಪ್ಪಂದ ಮಾಡಿಕೊಳ್ಳಬಹುದಲ್ಲವೇ......

ಅನೇಕ ಸೈನಿಕರು, ಅಮಾಯಕರು ಯುದ್ಧದ ದಾಳಿಗೆ ಬಲಿಯಾಗಿರುವ ಈ ಸಂದರ್ಭದಲ್ಲಿ ಮನಸ್ಸು ಮತ್ತೆ ಮತ್ತೆ ಹುತಾತ್ಮ ಭಾವನೆಗಿಂತ ಜೀವ ಉಳಿಸದೆ ಕೆಲವು ರಾಜಕಾರಣಿಗಳು ಮತ್ತು ಧರ್ಮದವರು ತಮ್ಮ ತೆವಲಿಗಾಗಿ ಅಮಾಯಕ ಜನರನ್ನು ಬಲಿಕೊಡುತ್ತಿರುವ ವ್ಯವಸ್ಥೆಯ ಬಗ್ಗೆ ಜಿಗುಪ್ಸೆ ಮೂಡುತ್ತದೆ.....

ಹಿಂಸೆಯ ಫಲಿತಾಂಶಗಳು ಮತ್ತೊಂದು ಹಿಂಸೆಗೆ ಬಿತ್ತುವ ಬೀಜ ಎಂದು ಖಚಿತವಾಗಿರುವಾಗಲೂ ಮತ್ತೆ ಮತ್ತೆ ಹಿಂಸೆಯಿಂದಲೇ ಪರಿಹಾರ ಹುಡುಕುವ ಹುಚ್ಚು ಮನಸ್ಸಿನ ಮನುಷ್ಯರ ಬಗ್ಗೆಯೇ ಕೋಪ ಬರುತ್ತದೆ. ಬದುಕಲು ಬಾರದ ಮನುಷ್ಯರು ಎಂದೇ ಕರೆಯಬೇಕಾಗುತ್ತದೆ. ರಾಜಕಾರಣಿಗಳೇನೋ ಅಧಿಕಾರಕ್ಕಾಗಿ ಹೋರಾಟ ಮಾಡುತ್ತಾರೆ. ಅವರೇನು ಯುದ್ಧ ಭೂಮಿಯಲ್ಲಿ ಹೋರಾಡುವುದಿಲ್ಲ. ಇವರ ರಕ್ಷಣೆಗಾಗಿ ಸೈನಿಕರು ಮತ್ತು ಸಾಮಾನ್ಯ ಜನರು ಜೀವ ತ್ಯಾಗ ಮಾಡಬೇಕು. ಇದು ಯಾವ ನ್ಯಾಯ..........

ಸಂಧಾನ ಸೂತ್ರಗಳು ಯಾವಾಗಲೂ ಇದ್ದೇ ಇರುತ್ತದೆ. ಆದರೆ ಅದನ್ನು ಗ್ರಹಿಸುವ ಮತ್ತು ಅನುಷ್ಠಾನ ಗೊಳಿಸುವ ವಿಶಾಲ ಮನೋಭಾವ ಮತ್ತು ಒಳ್ಳೆಯತನ ಮಾತ್ರ ಕಾಣೆಯಾಗಿದೆ. ಅದರ ಪರಿಣಾಮವೇ ಬಹುತೇಕ ಈ ಜಗತ್ತಿನಲ್ಲಿ ಶಾಂತಿಗಿಂತ ಹಿಂಸೆಯ ಪ್ರಮಾಣ ಜಾಸ್ತಿಯಾಗಿದೆ......

ಹೊಡೆತ ಬೀಳುವವರೆಗೆ ತಾನು ಸೂಪರ್ ಮ್ಯಾನ್ ಎಂಬಂತೆ ವರ್ತಿಸುವ ಮನುಷ್ಯರು ಮತ್ತು ಅವರ ನಿಯಂತ್ರಣದ ದೇಶಗಳು ಒಮ್ಮೆ ಬಲವಾದ ಹೊಡೆತ ಬಿದ್ದರೆ ನರಳುತ್ತಾ ಶರಣಾಗುತ್ತಾರೆ. ಅದೂ ಸಹ ತಾತ್ಕಾಲಿಕ. ಒಳಗೊಳಗೆ ದ್ವೇಷ ಅಸೂಯೆ ಹೊಗೆಯಾಡುತ್ತಲೇ ಇರುತ್ತದೆ. ಮತ್ತೆ ಕೆಲವು ಸಮಯದ ನಂತರ ಹಿಂಸೆಗೆ ಇಳಿಯುತ್ತಾರೆ. ಇಡೀ ಮಾನವ ಇತಿಹಾಸ ಇಂತಹ ಮನಸ್ಥಿತಿಯಿಂದಲೇ ತುಂಬಿದೆ..... ಶಾಂತಿ ಎಂಬುದು ವಿನಾಶದ ಸಿದ್ದತೆ ಎಂಬಂತಾಗಿದೆ. ಬದುಕು ಎಂಬುದು ಸಾವಿಗೆ ಸಿದ್ದತೆ ಎಂಬಂತೆ. ಒಟ್ಟಿನಲ್ಲಿ ಇದೇ ವಿಶ್ವದ ಸ್ವಾಭಾವಿಕ ಗುಣವಾಗಿರಬಹುದು. ಅದನ್ನು ಅನುಭವಿಸುತ್ತಲೇ ಬದುಕುವುದು ಅನಿವಾರ್ಯವೇ ಅಥವಾ ಅಹಿಂಸೆಯ ಪರ್ಯಾಯ ಮಾರ್ಗಗಳ ಹುಡುಕಾಟ ಸಾಧ್ಯವೇ.....

ಏಕೆಂದರೆ, ದಿನ ನಿತ್ಯ ಈ ರೀತಿ ತಮ್ಮ ದೇಶಗಳಿಗಾಗಿ ಪ್ರಾಣತ್ಯಾಗ ಮಾಡುತ್ತಿರುವ ಅನೇಕ ಯುವಕರ ಜೀವಗಳನ್ನು ಉಳಿಸಲು ಸಾಧ್ಯವಾಗದ ಈ ಜಗತ್ತಿನ ಎಲ್ಲಾ ದೇವರು, ಧರ್ಮಗಳು, ಸರ್ಕಾರಗಳಿಗೆ ದಯವಿಟ್ಟು ಮನುಷ್ಯ ಜೀವಿಗಳ ಬದುಕುವ ಹಕ್ಕು ಮತ್ತು ಸ್ವಾತಂತ್ರ್ಯವನ್ನು ಕಾಪಾಡಿ, ಮನುಷ್ಯ ಪ್ರಾಣಿಯ ಘನತೆಯನ್ನು ರಕ್ಷಿಸಿ, ಉಳಿಸಿ ಎಂದು ಮನವಿ ಮಾಡಿಕೊಳ್ಳುತ್ತಾ......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,
ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,
ಮನಸ್ಸುಗಳ ಅಂತರಂಗದ ಚಳವಳಿ,

ವಿವೇಕಾನಂದ. ಎಚ್. ಕೆ.
9663750451......
9844013068......

# ಯುದ್ಧ ನಿಂತರು ಸಾರ್ವಜನಿಕರ ಜೇಬಿಗೆ ಕತ್ತರಿ: ನಿಗದಿತ ದರಕ್ಕಿಂತ 71 ಹೆಚ್ಚು ಪೀಕುತ್ತಿರುವ ಗ್ಯಾಸ್ ವಿತರಕರು

ಒಂದೆಡೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನಸಾಮಾನ್ಯರ ಬದುಕು ದುಸ್ತರವಾಗುತ್ತಿದ್ದರೆ, ಮತ್ತೊಂದೆಡೆ ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿ ಗ್ಯಾಸ್ ಏಜೆನ್ಸಿಗಳು ಸಾರ್ವಜನಿಕರನ್ನು ಸುಲಿಗೆ ಮಾಡುತ್ತಿರುವ ಆತಂಕಕಾರಿ ವಿಷಯ ಬೆಳಕಿಗೆ ಬಂದಿದೆ. ವೈ.ಎನ್. ಹೊಸಕೋಟೆಯ ಸ್ಥಳೀಯ ಗ್ಯಾಸ್ ಏಜೆನ್ಸಿಯೊಂದು ಪಾವಗಡ ತಾಲ್ಲೂಕು ನಾಗಲಮಡಿಕೆ ಗ್ರಾಮದಲ್ಲಿ ಪ್ರತಿ ಸಿಲಿಂಡರ್‌ಗೆ ನಿಗದಿತ ದರಕ್ಕಿಂತ 71 ರೂಪಾಯಿಗಳಷ್ಟು ಹೆಚ್ಚಿನ ಹಣ ವಸೂಲಿ ಮಾಡುತ್ತಿದ್ದು, ಗ್ರಾಮಸ್ಥರು ಏಜೆನ್ಸಿಯ ವಿರುದ್ಧ ರೊಚ್ಚಿಗೆದ್ದಿದ್ದಾರೆ.

### ಸರ್ಕಾರದ ದರಕ್ಕೆ ಕವಡೆ ಕಾಸಿನ ಕಿಮ್ಮತ್ತಿಲ್ಲ!

ಸರ್ಕಾರವು ಅಡುಗೆ ಅನಿಲದ ದರವನ್ನು ನಿಯಮಿತವಾಗಿ ಪರಿಷ್ಕರಿಸುತ್ತದೆ ಮತ್ತು ಗ್ರಾಹಕರಿಗೆ ನಿಗದಿತ ದರದಲ್ಲೇ ಸಿಲಿಂಡರ್ ವಿತರಿಸಬೇಕೆಂಬ ಕಟ್ಟುನಿಟ್ಟಿನ ನಿಯಮವಿದೆ. ಆದರೆ, ನಾಗಲಮಡಿಕೆ ಗ್ರಾಮದಲ್ಲಿ ಪರಿಸ್ಥಿತಿಯೇ ಬೇರೆಯಾಗಿದೆ. ಇಲ್ಲಿ ಸಿಲಿಂಡರ್ ವಿತರಿಸಲು ಬರುವ ಏಜೆನ್ಸಿ ಸಿಬ್ಬಂದಿಗಳು, ಪ್ರತಿಯೊಬ್ಬ ಗ್ರಾಹಕರಿಂದಲೂ ಕಡ್ಡಾಯವಾಗಿ 71 ಹೆಚ್ಚುವರಿ ಹಣ ನೀಡುವಂತೆ ಪಟ್ಟು ಹಿಡಿಯುತ್ತಿದ್ದಾರೆ. ಈ ಹೆಚ್ಚುವರಿ ಹಣ ಯಾವುದಕ್ಕಾಗಿ ಎಂಬ ಪ್ರಶ್ನೆಗೆ ಸಿಬ್ಬಂದಿಗಳಿಂದ ಸಮರ್ಪಕ ಉತ್ತರ ಸಿಗುತ್ತಿಲ್ಲ. ಹಣ ನೀಡಲು ನಿರಾಕರಿಸುವ ಗ್ರಾಹಕರಿಗೆ ಸಿಲಿಂಡರ್ ನೀಡದೆ ವಾಪಸ್ ಕೊಂಡೊಯ್ಯುವ ಬೆದರಿಕೆ ಹಾಕುತ್ತಿದ್ದಾರೆ ಎಂದು ಗ್ರಾಮಸ್ಥರು ಗಂಭೀರವಾಗಿ ಆರೋಪಿಸಿದ್ದಾರೆ.

### ವಾರಗಟ್ಟಲೆ ಕಾದರೂ ಸಿಗದ ಸಿಲಿಂಡರ್: ವಿತರಣಾ ವ್ಯವಸ್ಥೆ ಅಸ್ತವ್ಯಸ್ತ

ಕೇವಲ ಹಣದ ಲೂಟಿ ಮಾತ್ರವಲ್ಲದೆ, ಗ್ಯಾಸ್ ವಿತರಣಾ ವ್ಯವಸ್ಥೆಯೂ ಸಂಪೂರ್ಣ ಹದಗೆಟ್ಟಿದೆ. ಗ್ರಾಹಕರು ಸಿಲಿಂಡರ್ ಬುಕ್ ಮಾಡಿ ವಾರಗಟ್ಟಲೆ ಕಾಯುವುದು ಅನಿವಾರ್ಯವಾಗಿದೆ.

ಪರದಾಟ: ಜನರು ತಮ್ಮ ದಿನನಿತ್ಯದ ಕೆಲಸ ಕಾರ್ಯಗಳನ್ನು ಬಿಟ್ಟು, ಕೂಲಿ ನಾಲಿ ಕೆಲಸಕ್ಕೆ ರಜೆ ಹಾಕಿ ಗ್ಯಾಸ್ ವಾಹನಕ್ಕಾಗಿ ರಸ್ತೆಯಲ್ಲೇ ಕಾದು ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿದೆ.

ವಿಳಂಬ: ಆನ್‌ಲೈನ್ ಅಥವಾ ಫೋನ್ ಮೂಲಕ ಬುಕಿಂಗ್ ಮಾಡಿದರೂ ಸಹ ಸಕಾಲಕ್ಕೆ ಸಿಲಿಂಡರ್ ತಲುಪುತ್ತಿಲ್ಲ. ಏಜೆನ್ಸಿಯ




ಈ ಬೇಜವಾಬ್ದಾರಿತನದಿಂದಾಗಿ ಅನೇಕ ಕುಟುಂಬಗಳು ಅನಿವಾರ್ಯವಾಗಿ ಮತ್ತೆ ಸೌದೆ ಒಲೆ ಅವಲಂಬಿಸುವಂತಾಗಿದೆ.

### ಗ್ರಾಹಕರ ಅಳಲು:

"ದಿನಬಳಕೆಯ ವಸ್ತುಗಳ ಬೆಲೆ ಗಗನಕ್ಕೇರಿದೆ. ಇಂತಹ ಸಮಯದಲ್ಲಿ ಕಷ್ಟಪಟ್ಟು ಸಂಪಾದಿಸಿದ ಹಣದಲ್ಲಿ ಗ್ಯಾಸ್ ಖರೀದಿಸುವುದೇ ಕಷ್ಟವಾಗಿದೆ. ಹೀಗಿರುವಾಗ ಏಜೆನ್ಸಿಯವರು ದರ್ಪದಿಂದ ಹೆಚ್ಚುವರಿ ಹಣ ಕೇಳುತ್ತಿದ್ದಾರೆ. ಕೇಳಿದಷ್ಟು ಹಣ ಕೊಡದಿದ್ದರೆ ಸಿಲಿಂಡರ್ ಇಲ್ಲ ಎನ್ನುತ್ತಾರೆ. ಇದು ಹಗಲು ಲೂಟಿಯಲ್ಲದೆ ಮತ್ತೇನು?" ಎಂದು ಗ್ರಾಮದ ಮಹಿಳೆಯರು ಬೇಸರ ವ್ಯಕ್ತಪಡಿಸಿದ್ದಾರೆ.

### ಅಧಿಕಾರಿಗಳ ಮೌನಕ್ಕೆ ಸಾರ್ವಜನಿಕರ ಪ್ರಶ್ನೆ

ಇಷ್ಟೆಲ್ಲಾ ಅಕ್ರಮಗಳು ಬಹಿರಂಗವಾಗಿ ನಡೆಯುತ್ತಿದ್ದರೂ ಆಹಾರ ಇಲಾಖೆಯ ಅಧಿಕಾರಿಗಳು ಮತ್ತು ಸಂಬಂಧಪಟ್ಟ ತಹಶೀಲ್ದಾರ್ ಕಚೇರಿಯವರು ಮೌನಕ್ಕೆ ಶರಣಾಗಿರುವುದು ಸಾರ್ವಜನಿಕರ ಅನುಮಾನಕ್ಕೆ ಕಾರಣವಾಗಿದೆ. ಗ್ಯಾಸ್ ಏಜೆನ್ಸಿಯ ಮಾಲೀಕರು ಮತ್ತು ಅಧಿಕಾರಿಗಳ ನಡುವೆ ಒಳ ಒಪ್ಪಂದವಿದೆಯೇ ಎಂಬ ಮಾತುಗಳು ಗ್ರಾಮಸ್ಥರಲ್ಲಿ ಕೇಳಿಬರುತ್ತಿವೆ.

### ಗ್ರಾಮಸ್ಥರ ಪ್ರಮುಖ ಬೇಡಿಕೆಗಳು:

ತಕ್ಷಣದ ತನಿಖೆ: ಅಕ್ರಮವಾಗಿ 71 ಹೆಚ್ಚುವರಿ ವಸೂಲಿ ಮಾಡುತ್ತಿರುವ ಏಜೆನ್ಸಿಯ ಮೇಲೆ ತಕ್ಷಣ ತನಿಖೆ ನಡೆಸಿ, ಪರವಾನಗಿ ರದ್ದುಪಡಿಸಬೇಕು.

ಸಕಾಲಕ್ಕೆ ವಿತರಣೆ: ಬುಕಿಂಗ್ ಮಾಡಿದ 48 ಗಂಟೆಗಳ ಒಳಗೆ ಮನೆ ಬಾಗಿಲಿಗೆ ಸಿಲಿಂಡರ್ ತಲುಪಿಸುವ ವ್ಯವಸ್ಥೆ ಮಾಡಬೇಕು.

ಪ್ರತಿಭಟನೆಯ ಎಚ್ಚರಿಕೆ:

ಸಂಬಂಧಪಟ್ಟ ಆಹಾರ ಇಲಾಖೆಯ ಅಧಿಕಾರಿಗಳು ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸದಿದ್ದರೆ ಮತ್ತು ಏಜೆನ್ಸಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳದಿದ್ದರೆ, ಮುಂದಿನ ದಿನಗಳಲ್ಲಿ ಗ್ರಾಮಸ್ಥರೆಲ್ಲರೂ ಸೇರಿ ತಾಲೂಕು ಕಚೇರಿ ಮುಂದೆ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳುವುದಾಗಿ ನಾಗಲಮಡಿಕೆ ಗ್ರಾಮದ ಸಾರ್ವಜನಿಕರು ಎಚ್ಚರಿಸಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

## ಚಿಕ್ಕನಾಯಕನಹಳ್ಳಿ ಪಟ್ಟಣದ ಸ್ವಾತಂತ್ರ್ಯ ಪದವಿ ಪೂರ್ವ ಕಾಲೇಜಿಗೆ ಶೇ. 81.12 ರಷ್ಟು ಫಲಿತಾಂಶ



ಚಿಕ್ಕನಾಯಕನಹಳ್ಳಿ: ಪಟ್ಟಣದ ಸರ್ಕಾರಿ ಸ್ವಾತಂತ್ರ್ಯ ಪದವಿ ಪೂರ್ವ ಕಾಲೇಜು ಈ ಬಾರಿಯ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 81.12 ರಷ್ಟು ಫಲಿತಾಂಶ ದಾಖಲಿಸುವ ಮೂಲಕ ಉತ್ತಮ ಸಾಧನೆ ಮಾಡಿದೆ ಎಂದು ಕಾಲೇಜಿನ ಪ್ರಾಂಶುಪಾಲರಾದ ಸಿ. ಬಿ. ಪರಮೇಶ್ವರಪ್ಪ ತಿಳಿಸಿದ್ದಾರೆ.

ಕಾಲೇಜಿನಲ್ಲಿ ಸುದ್ದಿಗಾರರೊಂದಿಗೆ ಮಾಹಿತಿ ಹಂಚಿಕೊಂಡ ಅವರು, ಈ ವರ್ಷ ಕಾಲೇಜಿನಿಂದ ಒಟ್ಟು 249 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಅವರಲ್ಲಿ 202 ವಿದ್ಯಾರ್ಥಿಗಳು ಯಶಸ್ವಿಯಾಗಿ ತೇರ್ಗಡೆ ಹೊಂದಿದ್ದಾರೆ. ಉತ್ತೀರ್ಣರಾದವರಲ್ಲಿ 26 ವಿದ್ಯಾರ್ಥಿಗಳು ಅತ್ಯುತ್ತಮ ದರ್ಜೆ ಪಡೆಯುವ ಮೂಲಕ ಕಾಲೇಜಿಗೆ ಕೀರ್ತಿ ತಂದಿದ್ದಾರೆ. ಉಳಿದಂತೆ 141 ವಿದ್ಯಾರ್ಥಿಗಳು ಪ್ರಥಮ ದರ್ಜೆ, 27 ವಿದ್ಯಾರ್ಥಿಗಳು ದ್ವಿತೀಯ ದರ್ಜೆ ಹಾಗೂ 8 ವಿದ್ಯಾರ್ಥಿಗಳು ತೃತೀಯ ದರ್ಜೆಯಲ್ಲಿ ಪಾಸಾಗಿದ್ದಾರೆ.

ಕಲಾ ವಿಭಾಗ: ಒಟ್ಟು 50 ವಿದ್ಯಾರ್ಥಿಗಳಲ್ಲಿ 43 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಶೇ. 86 ರಷ್ಟು ಫಲಿತಾಂಶ ಬಂದಿದೆ.

ವಿಜ್ಞಾನ ವಿಭಾಗ: ಪರೀಕ್ಷೆ ಬರೆದ 103 ವಿದ್ಯಾರ್ಥಿಗಳಲ್ಲಿ 84 ವಿದ್ಯಾರ್ಥಿಗಳು ಪಾಸಾಗಿದ್ದು, ಶೇ. 81.55 ರಷ್ಟು ಸಾಧನೆಯಾಗಿದೆ.

ವಾಣಿಜ್ಯ ವಿಭಾಗ: 96 ವಿದ್ಯಾರ್ಥಿಗಳಲ್ಲಿ 75 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದು, ಶೇ. 78.12 ರಷ್ಟು ಫಲಿತಾಂಶ ದಾಖಲಾಗಿದೆ.

ಅಭಿನಂದನೆ:

"ಗ್ರಾಮೀಣ ಭಾಗದ ವಿದ್ಯಾರ್ಥಿಗಳೇ ಹೆಚ್ಚಾಗಿರುವ ನಮ್ಮ ಕಾಲೇಜಿನಲ್ಲಿ ಈ ಮಟ್ಟದ ಫಲಿತಾಂಶ ಬಂದಿರುವುದು ಹೆಮ್ಮೆಯ ವಿಷಯ. ಉಪನ್ಯಾಸಕರ ಶ್ರಮ ಮತ್ತು ವಿದ್ಯಾರ್ಥಿಗಳ ಶಿಸ್ತುಬದ್ಧ ಅಧ್ಯಯನವೇ ಈ ಯಶಸ್ಸಿಗೆ ಕಾರಣ," ಎಂದು ಪ್ರಾಂಶುಪಾಲರು ಶ್ಲಾಘಿಸಿದರು.

ಉತ್ತಮ ಅಂಕ ಗಳಿಸಿ ಉತ್ತೀರ್ಣರಾದ ಎಲ್ಲಾ ವಿದ್ಯಾರ್ಥಿಗಳನ್ನು ಕಾಲೇಜಿನ , ಪ್ರಾಂಶುಪಾಲರು ಹಾಗೂ ಬೋಧಕ –ಬೋಧಕೇತರ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ

# ಅರ್ಕಾವತಿ ಭೂ ಸ್ವಾಧೀನದ ವಿರುದ್ಧ ನಗರಸಭೆ ನಿರ್ಣಯ ಡಿಸಿಎಂ ಡಿ.ಕೆ.ಶಿವಕುಮಾರ್ ಬಳಿ ನಿಯೋಗ | ಅಧಿಸೂಚನೆ ಕೈಬಿಡಲು ಮನವಿ



ರಾಮನಗರ : ಅರ್ಕಾವತಿ ಪಾರ್ಕ್ ನಿರ್ಮಾಣಕ್ಕಾಗಿ ದೇವಾಲಯ, ದರ್ಗಾ ಹಾಗೂ ವಸತಿ ಬಡಾವಣೆ ಭೂಸ್ವಾಧೀನವನ್ನು ವಿರೋಧಿಸಿ ನಿರ್ಣಯ ಕೈಗೊಂಡಿರುವ ರಾಮನಗರ ನಗರಸಭೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಬಳಿ ನಿಯೋಗ ತೆರಳಿ ಅಧಿಸೂಚನೆಯನ್ನು ಕೈಬಿಡಲು ಮನವಿ ಸಲ್ಲಿಸಲು ಸರ್ವಾನುಮತದ ಒಪ್ಪಿಗೆ ನೀಡಿದೆ.

ಗುರುವಾರ ರಾಮನಗರ ನಗರಸಭೆಯಲ್ಲಿ ಕೆ.ಶೇಷಾದ್ರಿ ಶಶಿ ಅವರ ಅಧ್ಯಕ್ಷತೆಯಲ್ಲಿ ಕರೆಯಲಾಗಿದ್ದ ತುರ್ತು ಸಾಮಾನ್ಯ ಸಭೆಯಲ್ಲಿ ಪಕ್ಷಾತೀತವಾಗಿ ಸರ್ವಾನುಮತದಿಂದ ಜನರಿಗೆ ಅನಾನುಕೂಲ ಮಾಡಿ ಪಾರ್ಕ್ ಅಭಿವೃದ್ಧಿ ಮಾಡುವ ಅಗತ್ಯವಿಲ್ಲ. ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಬಿಡಬೇಕು ಎಂಬ ಅಭಿಪ್ರಾಯಗಳು ಕೇಳಿಬಂದವು.

ಅರ್ಕಾವತಿ ನದಿ ದಂಡೆ ಅಭಿವೃದ್ಧಿ (ಅರ್ಕಾವತಿ ರಿವರ್ ಫ್ರಂಟ್ ಡೆವಲಪ್‌ಮೆಂಟ್) ಯೋಜನೆಗಾಗಿ ಜಿಲ್ಲಾಧಿಕಾರಿಗಳು ಫೆ.20ರಂದು ಭೂಸ್ವಾಧೀನಕ್ಕೆ ಪ್ರಾಥಮಿಕ ಅಧಿಸೂಚನೆ ಹೊರಡಿಸಿದ್ದರು. 28 ಎಕರೆ ಭೂಸ್ವಾದೀನ ಅಧಿಸೂಚನೆಯಲ್ಲಿ ರಾಮನಗರದ ಐತಿಹಾಸಿಕ ಹಿನ್ನೆಲೆಯುಳ್ಳ ಶ್ರೀ ಅಕೇಶ್ವರಸ್ವಾಮಿ ದೇವಾಲಯ, ಪೀರನ್ ಶಾವಲಿ ದರ್ಗಾ ಹಾಗೂ ಸುಮಾರು 80 ಮನೆಗಳಲ್ಲ ರಾಘವೇಂದ್ರ ಕಾಲೋನಿಯನ್ನು ಭೂಪ್ರದೇಶ ಭೂಸ್ವಾಧೀನ ಅಧಿಸೂಚನೆಗೆ ಒಳಪಟ್ಟಿತ್ತು.

ಈ ಭೂಸ್ವಾಧೀನ ಪ್ರಕ್ರಿಯೆಗೆ ಸಾರ್ವಜನಿಕರ ವಲಯದಲ್ಲಿ ತೀವ್ರ ವಿರೋಧ ವ್ಯಕ್ತವಾಗಿತ್ತು. ಬಡಾವಣೆ ನಿವಾಸಿಗಳು, ದರ್ಗಾ ಕಮಿಟಿ ಸದಸ್ಯರು, ಅಕೇಶ್ವರಸ್ವಾಮಿ ದೇವಾಲಯ ಭಕ್ತಾಧಿಗಳು ಇದನ್ನು ವಿರೋಧಿಸಿ ನಗರಸಭೆ ಮನವಿ ಸಲ್ಲಿಸಿದ್ದರು. ಈ ಹಿನ್ನೆಲೆಯಲ್ಲಿ ಸಾರ್ವಜನಿಕರ ಹಿತದೃಷ್ಟಿಯಿಂದ ನಗರಸಭೆ ಅಧ್ಯಕ್ಷ ಕೆ.ಶೇಷಾದ್ರಿ ಅವರು ತುರ್ತು ಸಾಮಾನ್ಯ ಸಭೆಯನ್ನು ಗುರುವಾರ ಕರೆದಿದ್ದರು. ಸಭೆಯಲ್ಲಿ ಬಹುತೇಕ ಎಲ್ಲ ಸದಸ್ಯರು ಈ ಭೂಸ್ವಾಧೀನಕ್ಕೆ ವಿರೋಧ ವ್ಯಕ್ತಪಡಿಸಿ, ಮುಂದಿನ ಹೋರಾಟಕ್ಕೆ ನಗರಸಭೆ ಜೊತೆ ನಿಲ್ಲಲಿದ್ದೇವೆ ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು.

ಮಾಜಿ ಅಧ್ಯಕ್ಷೆ ಪಾರ್ವತಮ್ಮ ಮಾತನಾಡಿ, ರಾಮನಗರಕ್ಕೆ ಒಳ್ಳೆಯ ಪಾರ್ಕ್ ಬೇಕು. ಆದರೆ ನೂರಾರು ವರ್ಷಗಳ ಇತಿಹಾಸ ಇರುವ ದೇವಾಲಯ, ದರ್ಗಾ, ಜನ ವಸತಿ ಪ್ರದೇಶವನ್ನು ಸ್ವಾಧೀನ ಮಾಡಿಕೊಂಡು ಪಾರ್ಕ್ ಮಾಡುವ ಅಗತ್ಯವಿಲ್ಲ. ಇಂತಹ ನಿರ್ಧಾರದಿಂದ ಜನರ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಆಗಲಿದೆ. ಭೂಸ್ವಾಧೀನ ಅಧಿಸೂಚನೆಯಲ್ಲಿ ಜನವಸತಿ ಪ್ರದೇಶ ರಾಘವೇಂದ್ರ ಕಾಲೋನಿ, ದೇವಾಲಯ, ದರ್ಗಾವನ್ನು ಕೈಬಿಡಬೇಕು ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು.

ಸದಸ್ಯ ನಿಜಾಮುದ್ದೀನ್ ಷರೀಫ್ ಅವರು ಮಾತನಾಡಿ, ಶಾಸಕರು ದರ್ಗಾ, ದೇವಾಲಯ, ಮನೆಗಳಿಗೆ ಏನು ಧಕ್ಕೆ ಆಗುವುದಿಲ್ಲ ಎಂದು ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದಾರೆ. ಆದರೆ ಇದು ಅಧಿಕೃತವೂ ಅಲ್ಲ, ಅಂತಿಮವೂ ಅಲ್ಲ. ಈ ವಿಚಾರದಲ್ಲಿ ನಗರಸಭೆ ತೆಗೆದುಕೊಳ್ಳುವ ನಿರ್ಧಾರಕ್ಕೆ ನಾವು ಬದ್ಧರಾಗಿರುತ್ತೇವೆ ಎಂದರು.

ವಿರೋಧ ಪಕ್ಷದ ನಾಯಕ ಜೆಡಿಎಸ್‌ನ ಮಂಜುನಾಥ್ ಮಾತನಾಡಿ, ಭೂ ಸ್ವಾಧೀನ ಪ್ರಕ್ರಿಯೆ ಸಂಬಂಧ ರಾಜ್ಯ ಸರ್ಕಾರ 2026ರ ಜನವರಿಯಲ್ಲಿ ಅಧಿಸೂಚನೆ ಹೊರಡಿಸಿದೆ. ಆದರೆ, ನದಿ ದಂಡೆಯಲ್ಲಿ ಒಂದು ವರ್ಷದ ಹಿಂದಿನಿಂದಲೇ ತಡೆಗೋಡೆ ನಿರ್ಮಾಣ ಕಾಮಗಾರಿ ನಡೆಯುತ್ತಿದ್ದು, ಸರ್ಕಾರದ ಆದೇಶಕ್ಕೂ ಮೊದಲೇ ಕಾಮಗಾರಿ ಹೇಗೆ ಪ್ರಾರಂಭಿಸಲಾಗಿದೆ ಎಂದು ಪ್ರಶ್ನಿಸಿದರು. ಕೆಲವರ ಭೂಮಿ ಪರಿವರ್ತನೆಯಾಗಿ ಮಾಡಲಾಗಿದೆ. ಇದು ಹೇಗೆ ಸಾಧ್ಯವಾಯಿತು ಎಂದು ಸೋಜಿಗ ವ್ಯಕ್ತಪಡಿಸಿದರು.

ಪುರಾತನವಾದ ಅರ್ಕೇಶ್ವರ ಕಾಲೋನಿ ಮತ್ತು ಪೀರನ್ ಷಾ ವಲಿ ದರ್ಗಾಗಳೊಂದಿಗೆ ಜನರು ಭಾವನಾತ್ಮಕ ಸಂಬಂಧ ಹೊಂದಿದ್ದಾರೆ. ರಾಘವೇಂದ್ರ ಕಾಲೋನಿ ನಿವಾಸಿಗಳು 40–50 ವರ್ಷಗಳಿಂದ ಜೀವನ ಸಾಗಿಸುತ್ತಿದ್ದಾರೆ. ಭಕ್ತರ ಭಾವನೆಗಳಿಗೆ ಧಕ್ಕೆ ತಂದು, ನಿವಾಸಿಗಳನ್ನು ಬೀದಿಗೆ ತಂದು ಅಭಿವೃದ್ಧಿ ಮಾಡುವುದು ಬೇಕಾಗಿಲ್ಲ. ಹೀಗಾಗಿ ಈ ಯೋಜನೆ ಸಮ್ಮತವಲ್ಲ ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಸ್ಥಾಯಿ ಸಮಿತಿ ಅಧ್ಯಕ್ಷ ಆರೀಫ್ ಮಾತನಾಡಿ, ಮನೆಗಳನ್ನು ಹೊಡೆದು ಪಾರ್ಕ್ ಮಾಡುವುದು ಒಳ್ಳೆಯದಲ್ಲಿ. ಇದರಿಂದ ನೂರಾರು ಜನರ ಬದುಕು ಬೀದಿಗೆ ಬರಲಿದೆ. ಸಾಮಾನ್ಯ ಸಭೆ ತೆಗೆದುಕೊಳ್ಳುವ ನಿರ್ಣಯಕ್ಕೆ ನಮ್ಮ ಸಂಪೂರ್ಣ ಬೆಂಬಲವಿದೆ ಎಂದರು.

ನಗರ ಸಭೆ ಸದಸ್ಯ ಸೋಮಶೇಖರ್ ಅವರು ಮಾತನಾಡಿ, ಅಕೇಶ್ವರಸ್ವಾಮಿ ದೇವಾಲಯ, ದರ್ಗಾಗೆ ಐತಿಹಾಸಿಕ ಹಿನ್ನೆಲೆ ಇದೆ. ಯೋಜನೆಯ ಸ್ವರೂಪವೇ ಅವೈಜ್ಞಾನಿಕ. ಇದರಿಂದ ಅರ್ಕಾವತಿ ನದಿ ದಡದಲ್ಲಿ ಕೃಷಿಯನ್ನು ನಂಬಿ ಬದುಕುತ್ತಿರುವ ಜನರ ಬದುಕು ಅತಂತ್ರವಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸದಸ್ಯರಾದ ಮಹಾಲಕ್ಷ್ಮಿ ಗೂಳಿಗೌಡ, ಮಂಜುಳಾ ವೆಂಕಟೇಶ್, ಪದ್ಮಶ್ರೀ, ಗ್ಯಾಬ್ರಿಯಲ್, ಸೈಯದ್ ಅಕ್ಲಿಂ, ಮೊಯಿನ್ ಖುರೇಷಿ, ರಮೇಶ್, ಫೈರೋಜ್ ಪಾಷ, ಬಿ.ಕೆ.ಪವಿತ್ರ, ವಿಜಯ ಕುಮಾರಿ ಅವರು ಭೂಸ್ವಾದೀನವನ್ನು ವಿರೋಧಿಸಿ ಸಾರ್ವಜನಿಕರಿಗೆ ತೊಂದರೆ ಆಗದಂತೆ ಯೋಜನೆ ಅನುಷ್ಠಾನ ಮಾಡಬೇಕು ಎಂದು ಒತ್ತಾಯಿಸಿದರು.

ಸದಸ್ಯರ ಅಭಿಪ್ರಾಯಗಳನ್ನು ಆಲಿಸಿದ ನಗರಸಭೆ ಅಧ್ಯಕ್ಷ ಕೆ.ಶೇಷಾದ್ರಿ ಶಶಿ ಅವರು, ದೇವಾಲಯ, ದರ್ಗಾ, ರಾಘವೇಂದ್ರ ಕಾಲೋನಿ ವಸತಿ ಪ್ರದೇಶವನ್ನು ಭೂಸ್ವಾಧೀನವನ್ನು ವಿರೋಧಿಸಿ, ಅದನ್ನು ಕೈಬಿಡುವಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಬಳಿ ನಗರಸಭೆ ನಿಯೋಗ ತೆರಳಿ ಮನವಿ ಮಾಡಲು ನಿರ್ಣಯ ಕೈಗೊಂಡರು. ಇದಕ್ಕೆ ಸರ್ವಾಮತದ ಒಪ್ಪಿಗೆ ದೊರೆಯಿತು.

# ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟ: ರಾಜ್ಯಕ್ಕೆ ಉಡುಪಿ ಪ್ರಥಮ; ಫಲಿತಾಂಶದಲ್ಲಿ ಭಾರೀ ಸುಧಾರಣೆ ಈ ಭಾರೀಯೂ ಬಾಲಕಿಯರೇ ಮೇಲುಗೈ

ಬೆಂಗಳೂರು: ಲಕ್ಷಾಂತರ ವಿದ್ಯಾರ್ಥಿಗಳು ಕಾತರದಿಂದ ಕಾಯುತ್ತಿದ್ದ 2025–26ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶ ಗುರುವಾರ ಪ್ರಕಟವಾಗಿದ್ದು, ಫಲಿತಾಂಶದಲ್ಲಿ ಈ ಬಾರಿ ದಾಖಲೆಯ ಹೆಚ್ಚಳವಾಗಿದೆ.

ಶಿಕ್ಷಣ ಸಚಿವ ಮಧುಬಂಗಾರಪ್ಪ ಅವರು ಇಂದು ಸಂಜೆ ಮಲ್ಲೇಶ್ವರಂನಲ್ಲಿರುವ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ, ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶವನ್ನು ಪ್ರಕಟಿಸಿದರು.

ಈ ಬಾರಿ ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶದಲ್ಲಿ ದಾಖಲೆ ಮಟ್ಟದಲ್ಲಿ ಏರಿಕೆ ಕಂಡಿದ್ದು, ಕಳೆದ ವರ್ಷಕ್ಕಿಂತ ಶೇ. 12 ರಷ್ಟು ಹೆಚ್ಚು ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ. ಇದು ಐತಿಹಾಸಿಕ ದಿನ ಸಚಿವರು ಹರ್ಷ ವ್ಯಕ್ತಪಡಿಸಿದರು.

ಈ ವರ್ಷ ಶೇ.86ರಷ್ಟು ಮಕ್ಕಳು ಉತ್ತೀರ್ಣರಾಗಿದ್ದಾರೆ. ಅಂದರೆ 7,10,363 ವಿದ್ಯಾರ್ಥಿಗಳ ಪೈಕಿ 6.10 ಲಕ್ಷ ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಕಳೆದ ವರ್ಷ ಶೇ.73.45ರಷ್ಟು ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದರು. ಇದರೊಂದಿಗೆ ಈ ಬಾರಿ ಪಿಯುಸಿ ಫಲಿತಾಂಶದಲ್ಲಿ ಭಾರೀ ಸುಧಾರಣೆ ಕಂಡು ಬಂದಿದೆ.

ಈ ಸಲವೂ ಬಾಲಕಿಯರೇ ಮೇಲುಗೈ ಸಾಧಿಸಿದ್ದು, ಶೇಕಡಾ 88.70 ರಷ್ಟು ಬಾಲಕಿಯರು ಉತ್ತೀರ್ಣರಾಗಿದ್ದಾರೆ. ಶೇಕಡಾ 83.65ರಷ್ಟು ಬಾಲಕರು ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಾರೆ ಎಂದು ಮಧು ಬಂಗಾರಪ್ಪ ಅವರು ಮಾಹಿತಿ ನೀಡಿದರು.

### 9 ವಿದ್ಯಾರ್ಥಿಗಳಿಗೆ 590ಕ್ಕಿಂತ ಅಧಿಕ ಅಂಕ



ವಾಣಿಜ್ಯ ವಿಭಾಗದಲ್ಲಿ 9 ವಿದ್ಯಾರ್ಥಿಗಳು 590ಕ್ಕಿಂತ ಅಧಿಕ ಅಂಕ ಗಳಿಸಿದ್ದಾರೆ. ಒಂದೇ ಕಾಲೇಜಿನ 9 ವಿದ್ಯಾರ್ಥಿಗಳು ವಾಣಿಜ್ಯ ವಿಭಾಗದಲ್ಲಿ ಈ ಸಾಧನೆ ಮಾಡಿದ್ದಾರೆ.

ಬೆಂಗಳೂರಿನ ರಾಜಾಜಿನಗರದ ೦ಖಅ ಕಾಲೇಜಿನ 9 ವಿದ್ಯಾರ್ಥಿಗಳು ಉತ್ತಮ ಅಂಕಗಳೊಂದಿಗೆ ತೇರ್ಗಡೆಯಾಗಿದ್ದಾರೆ.

### ಉಡುಪಿಗೆ ಮೊದಲ ಸ್ಥಾನ

ಈ ಬಾರಿಯ ಪಿಯುಸಿ ಫಲಿತಾಂಶದಲ್ಲಿ ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳು ಪ್ರಥಮ ಸ್ಥಾನ ಪಡೆದಿವೆ. ಈ ಬಾರಿಯೂ ಈ ಎರಡು ಜಿಲ್ಲೆಗಳು ಅತ್ಯಧಿಕ ಪಾಸ್ ಪ್ರಮಾಣ ದಾಖಲಿಸಿವೆ.

ಶೇಕಡಾ 96.39 ಫಲಿತಾಂಶ ಪಡೆದು ಉಡುಪಿ ಜಿಲ್ಲೆ ರಾಜ್ಯಕ್ಕೆ ಮತ್ತೆ ಪ್ರಥಮ ಸ್ಥಾನ ಪಡೆದುಕೊಂಡರೆ, ಉತ್ತರ ಕನ್ನಡ ಜಿಲ್ಲೆ ಶೇಕಡಾ 96.35 ಫಲಿತಾಂಶದೊಂದಿಗೆ ರಾಜ್ಯಕ್ಕೆ ಎರಡನೇ ಸ್ಥಾನ ಪಡೆದಿದೆ.

ಬೆಂಗಳೂರು ನಗರ ಮತ್ತು ಮೈಸೂರು ಜಿಲ್ಲೆಗಳೂ ಉತ್ತಮ ಸಾಧನೆ ತೋರಿದ್ದು, ಹಾಸನ ಹಾಗೂ ಯಾದಗಿರಿ ಜಿಲ್ಲೆಗಳು ಶೇಕಡಾ 71.21 ಫಲಿತಾಂಶದೊಂದಿಗೆ ರಾಜ್ಯಕ್ಕೆ ಕೊನೆಯ ಸ್ಥಾನದಲ್ಲಿವೆ.

### ಅತಿ ಹೆಚ್ಚು ಅಂಕ ಪಡೆದ ಟಾಪರ್ ಗಳು

ವಾಣಿಜ್ಯ ವಿಭಾಗದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಆಳ್ವಾಸ್ ಕಾಲೇಜಿನ ವಿದ್ಯಾರ್ಥಿನಿ ದಿಶಾ ಅವರು 600 ಅಂಕಗಳಿಗೆ 600 ಅಂಕ ಪಡೆದು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ಇನ್ನು ಕಲಾ ವಿಭಾಗದಲ್ಲಿ ಬಳ್ಳಾರಿ ಜಿಲ್ಲೆಯ ಕೊಟ್ಟೂರಿನ ಇಂದು ಕಾಲೇಜಿನ ಇಬ್ಬರು ವಿದ್ಯಾರ್ಥಿನಿಯರಾದ ಅರ್ಚನಾ ಮತ್ತು ಸಂಗೀತ ಅವರು 600 ಅಂಕಗಳಿಗೆ 598 ಪಡೆದು ರಾಜ್ಯಕ್ಕೆ ಮೊದಲ ಸ್ಥಾನ ಪಡೆದಿದ್ದಾರೆ.

ವಿಜ್ಞಾನ ವಿಭಾಗದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಶಮನ್ಯು ಎಸ್. ಶೆಟ್ಟಿ ಅವರು 600 ಅಂಕಗಳಿಗೆ 598 ಅಂಕ ಪಡೆದು ರಾಜ್ಯಕ್ಕೆ ಮೊದಲ ಸ್ಥಾನ ಪಡೆದಿದ್ದಾರೆ.

### ಈ ಬಾರಿ ಡಿಜಿಲಾಕರ್‌ನಲ್ಲೂ ಫಲಿತಾಂಶ ಲಭ್ಯ




ಇದೇ ಮೊದಲ ಬಾರಿಗೆ ವಿದ್ಯಾರ್ಥಿಗಳ ಫಲಿತಾಂಶದ ಅಂಕಪಟ್ಟಿಯು ಡಿಜಿಲಾಕರ್ ಮೂಲಕ ಲಭ್ಯವಾಗಲಿದೆ. ಒಂದು ವೇಳೆ ವೆಬ್‌ಸೈಟ್‌ನಲ್ಲಿ ರಿಸಲ್ಟ್ ನೋಡುವಾಗ ಸರ್ವರ್ ಸಮಸ್ಯೆ ಎದುರಾದರೆ ಡಿಜಿಲಾಕರ್ ಮೂಲಕವೇ ಮಾರ್ಕ್ಸ್ ಕಾರ್ಡ್ ಪಡೆದುಕೊಳ್ಳಬಹುದು.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

# ಮಾಗಡಿ ಶಾಸಕ ಹೆಚ್.ಸಿ. ಬಾಲಕೃಷ್ಣಗೆ ಬಿಗ್ ಶಾಕ್: ಜಾಮೀನು ರಹಿತ ವಾರೆಂಟ್ ಜಾರಿ



ಮಾಗಡಿ ಶಾಸಕ ಹೆಚ್.ಸಿ.ಬಾಲಕೃಷ್ಣ ವಿರುದ್ಧ 42ನೇ ಎಸಿಎಂಎಂ ಕೋರ್ಟ್ ಜಾಮೀನು ರಹಿತ ವಾರೆಂಟ್ ಜಾರಿ ಮಾಡಿದೆ. 2018ರ ವಿಧಾನಸಭಾ ಚುನಾವಣೆ ವೇಳೆ ಯಾವುದೇ ಅನುಮತಿ ಪಡೆಯದೆ ನೀತಿ ಸಂಹಿತೆ ಉಲ್ಲಂಘಿಸಿ ಸಭೆ ನಡೆಸಿದ ಪ್ರಕರಣದಲ್ಲಿ ಕೋರ್ಟ್ ವಿಚಾರಣೆಗೆ ಗೈರಾದ ಕಾರಣ ವಾರೆಂಟ್ ಜಾರಿ ಮಾಡಲಾಗಿದೆ.

ಮಾಗಡಿ ಕ್ಷೇತ್ರದ ಕಾಂಗ್ರೆಸ್ ಶಾಸಕ ಹೆಚ್.ಸಿ.ಬಾಲಕೃಷ್ಣ ಅವರಿಗೆ 42ನೇ ಎಸಿಎಂಎಂ ಕೋರ್ಟ್ ಬಿಗ್ ಶಾಕ್ ನೀಡಿದೆ. 2018ರ ಎಲೆಕ್ಷನ್ ವೇಳೆ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣ ಸಂಬಂಧ ಜಾಮೀನು ರಹಿತ ವಾರೆಂಟ್ ಜಾರಿ ಮಾಡಿದೆ. ಚುನಾವಣೆ ವೇಳೆ ಮತದಾರರಿಗೆ ಆಮಿಷ ಕೇಸ್ ಸಂಬಂಧ ಕಾಂಗ್ರೆಸ್ ನಾಯಕನ ವಿರುದ್ಧ ಅಬಕಾರಿ ಕಾಯ್ದೆ, ಐಪಿಸಿ ಅಡಿ ಕೇಸ್ ದಾಖಲಾಗಿತ್ತು. ಆದರೆ ಪ್ರಕರಣ ಸಂಬಂಧ ಕೋರ್ಟ್ ವಿಚಾರಣೆಗೆ ಹಾಜರಾಗದೇ ಶಾಸಕರು ಗೈರಾಗಿರುವ ಹಿನ್ನಲೆ ಕೋರ್ಟ್ ಜಾಮೀನು ರಹಿತ ಬಂಧನ ವಾರೆಂಟ್ ಜಾರಿ ಮಾಡಿದೆ.

ಪ್ರಕರಣ ಏನು?

2018ರ ವಿಧಾನಸಭಾ ಎಲೆಕ್ಷನ್ ಸಂದರ್ಭ ಚುನಾವಣಾ ನೀತಿ ಸಂಹಿತೆ ಉಲ್ಲಂಘಿಸಿ ರಾಮನಗರ ತಾಲೂಕಿನ ಬಸವನಪುರ ಗ್ರಾಮದ ಬಳಿ ಇರುವ ಹಿಲ್ ವ್ಯೂ ರೆಸಾರ್ಟ್‌ನಲ್ಲಿ ಕಾಂಗ್ರೆಸ್ ಕಾರ್ಯಕರ್ತರ ಸಭೆಯನ್ನು ಹೆಚ್. ಸಿ. ಬಾಲಕೃಷ್ಣ ನಡೆಸಿದ್ದರು. ಈ ಬಗ್ಗೆ ಮಾಹಿತಿ ದೊರೆತ ಹಿನ್ನೆಲೆ ತಹಶೀಲ್ದಾರ್ ವಿಷಯವನ್ನು ಫ್ಲೈಯಿಂಗ್ ಸ್ಕ್ವಾಡ್‌ಗೆ ತಿಳಿಸಿದ್ದರು. ಆ ಮಾಹಿತಿ ಆಧರಿಸಿ ಅಬಕಾರಿ ಸಬ್ ಇನ್ಸ್‌ಕ್ಟರ್ ಸಮೇತ ಸ್ಥಳಕ್ಕೆ ಫ್ಲೈಯಿಂಗ್ ಸ್ಕ್ವಾಡ್ ಅಧಿಕಾರಿ ಭೇಟಿ ನೀಡಿದ್ದು, ಈ ವೇಳೆ ವೇದಿಕೆ ಮೇಲೆ ಹೆಚ್.ಸಿ.ಬಾಲಕೃಷ್ಣ ಕಾರ್ಯಕರ್ತರನ್ನು ಉದ್ದೇಶಿಸಿ ಭಾಷಣ ಮಾಡುತ್ತಿದ್ದು ಕಂಡಿತ್ತು. ಈ ಕಾರ್ಯಕ್ರಮ ಆಯೋಜನೆ ಮಾಡಲು ಸಂಬಂಧಪಟ್ಟ ಚುನಾವಣೆ ಅಧಿಕಾರಿಯಿಂದ ಯಾವುದೇ ಅನುಮತಿಯನ್ನು ಪಡೆಯದ ಕಾರಣ ಪ್ರಕರಣ ದಾಖಲಾಗಿತ್ತು.

ಅಲ್ಲದೆ, ಹಿಲ್ ವ್ಯೂನ ರೆಸಾರ್ಟ್‌ನಲ್ಲಿ ಪರವಾನಿಗೆ ಇಲ್ಲದೆ ಮದ್ಯಪಾನಕ್ಕೆ ವ್ಯವಸ್ಥೆಯನ್ನೂ ಮಾಡಿದ್ದ ಕಾರಣ ರೆಸಾರ್ಟ್ ಮಾನೇಜರ್ ವಿರುದ್ಧವೂ ಕ್ರಮ ಜರುಗಿಸುವಂತೆ ರಾಮನಗರ ರೂರಲ್ ಪೊಲೀಸ್ ಠಾಣೆಯಲ್ಲಿ ಕಲಂ 34 ಐಪಿಸಿ, ಕಲಂ 171(ಇ) ಖಿಕ ೦ಭಿಣ ಹಾಗೂ ಕಲಂ 34, 38(೦) ಏ.ಇ ೦ಭಿಣ–1965 ಅಡಿ ಪ್ರಕರಣ ದಾಖಲಾಗಿದ್ದು, ಈ ಕೇಸ್‌ನ ವಿಚಾರಣೆಯು 42ನೇ ಎಸಿಎಂಎಂ ಕೋರ್ಟ್‌ನಲ್ಲಿ ನಡೆಯುತ್ತಿತ್ತು. ಆದರೆ ಹಾಲಿ ಶಾಸಕ ಬಾಲಕೃಷ್ಣ ವಿಚಾರಣೆಗೆ ಬಾರದ ಕಾರಣ ನ್ಯಾಯಾಲಯವೀಗ ಬಿಸಿ ಮುಟ್ಟಿಸಿದೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಸರಕಾರಿ ಪ್ರಥಮ ದರ್ಜೆ ಕಾಲೇಜಿಗೆ ಶೇ. 96 ಫಲಿತಾಂಶ



ಹುಳಿಯಾರು : ಹುಳಿಯಾರು–ಕೆಂಕೆರೆಯ ಸರಕಾರಿ ಪದವಿ ಪೂರ್ವ ಕಾಲೇಜಿಗೆ ಶೇಕಡಾ. 96.61 ಫಲಿತಾಂಶ ಲಬಿಸಿದೆ,

ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳು 294 ರಲ್ಲಿ, 284 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು ಅದರಲ್ಲಿ ವಿಜ್ಞಾನ ವಿಭಾಗದಲ್ಲಿ ಪವನ್ ಡಿ ಎಲ್ – 578, ಅರ್ಷಿಯಾ ಬಾನು – 574, ಅಪೂರ್ವ – 567. ವಾಣಿಜ್ಯ ವಿಭಾಗದಲ್ಲಿ ಶುಭರಾಣಿ – 585, ಮಿಸ್ಬಾ ನೂರ್ – 579, ಯಶಸ್ವಿನಿ ಸಿ ಎ – 578. ಕಲಾ ವಿಭಾಗದಲ್ಲಿ ದಿವ್ಯ ಬಿ ಸಿ – 578, ರಮ್ಯ ಕೆ ಆರ್ – 570, ಹರ್ಷವರ್ಧನ – 555 ಅಂಕಗಳನ್ನು ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

# ರೈತಾಪಿ ವರ್ಗದ ಜನರಿಗೆ ಉತ್ತಮ ಸೇವೆ



ಮಧುಗಿರಿ: ರೈತಾಪಿ ವರ್ಗದ ಜನರಿಗೆ ಹಾಗೂ ಸಾರ್ವಜನಿಕರಿಗೆ ಉತ್ತಮ ಸೇವೆ ನೀಡುವಂತೆ ವಿಧಾನಪರಿಷತ್ ಸದಸ್ಯರಾದ ರಾಜೇಂದ್ರ ರಾಜಣ್ಣ ತಿಳಿಸಿದ್ದಾರೆ ತಾಲೂಕಿನ ಪುರವಾರ ಹೋಬಳಿ ಬಾಲ್ಯ ಗ್ರಾಮದಲ್ಲಿ ತುಮಕೂರು ಡಿ ಸಿ ಸಿ ಬ್ಯಾಂಕ್ ವತಿಯಿಂದ ನಿರ್ಮಿಸಿರುವ ನೂತನ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದ ಅವರು ಬಹುತೇಕ ಎಲ್ಲಾ ಕಡೆ ಡಿಸಿಸಿ ಬ್ಯಾಂಕ್ ಶಾಖೆಗಳಿಗೆ ನೂತನ ಕಟ್ಟಡಗಳನ್ನು ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದ ಅವರು ರೈತರು ಬ್ಯಾಂಕಿನಿಂದ ಪಡೆದ ಸಾಲವನ್ನು ಅಭಿವೃದ್ಧಿಗಾಗಿ ಉಪಯೋಗಿಸಿಕೊಂಡು ಆರ್ಥಿಕವಾಗಿ ಸಬಲರಾಗಬೇಕೆಂದು ರಾಜ್ಯದಲ್ಲಿ ಮೊಟ್ಟಮೊದಲ ಬಾರಿಗೆ ಮರಣ ಹೊಂದಿದ ರೈತರ ಸಾಲವನ್ನು ತುಮಕೂರು ಡಿಸಿಸಿ ಬ್ಯಾಂಕ್ ವತಿಯಿಂದ ಕೆ ಎನ್ ರಾಜಣ್ಣ ರವರ ಇಚ್ಛಾಶಕ್ತಿಯ ಫಲವಾಗಿ ಸಾಲ ಮನ್ನಾ ಮಾಡಲಾಗುತ್ತಿದೆ ಎಂದು ತಿಳಿಸಿದರು

ಈ ಸಂದರ್ಭದಲ್ಲಿ ಡಿಸಿಸಿ ಬ್ಯಾಂಕಿನ ಉಪಾಧ್ಯಕ್ಷರಾದ ಜಿ.ಜೆ. ರಾಜಣ್ಣ, ನಿರ್ದೇಶಕರುಗಳಾದ ಬಿ. ನಾಗೇಶ್ ಬಾಬು, ಲಕ್ಷ್ಮಿ ನಾರಾಯಣ್, ಹನುಮಾನ್, ಕೆಎಂಎಫ್ ಮಾಜಿ ನಿರ್ದೇಶಕ ಕಾಂತರಾಜು, ಸಹಕಾರ ಸಂಘಗಳ ಉಪ ನಿಬಂಧಕರು ಎಚ್. ಮೂರ್ತಿ, ಸಹಕಾರ ಸಂಘಗಳ ಸಾಹಾಯಕ ನಿಬಂಧಕರಾದ ಓಬಳೇಶ್, ನಬಾರ್ಡ್ ಜಿಲ್ಲಾ ಅಭಿವೃದ್ಧಿ ಅಧಿಕಾರಿ ಸಾಯಿ ಗಣೇಶ್, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಂಗಮಪ್ಪ, ಸಲಹೆಗಾರರಾದ ರಮಣ ರೆಡ್ಡಿ, ಮೇಲ್ವಿಚಾರಕರಾದ ಎನ್. ರಾಮಕೃಷ್ಣ, ಆರ್. ಪ್ರದೀಪ್, ಬ್ಯಾಲ್ಯಾ ಶಾಖೆಯ ವ್ಯವಸ್ಥಾಪಕರಾದ ಶ್ರೀಮತಿ ಎಮ್. ಎನ್. ಕಾತ್ಯಾಯಿನಿ ಹಾಗೂ ಮುಖಂಡರುಗಳು, ಅಧಿಕಾರಿಗಳು, ಶಾಖೆಯ ಸಿಬ್ಬಂದಿ ವರ್ಗದವರು.

# ಇತಿಹಾಸ ಪ್ರಸಿದ್ಧ ಹರಳೂರು ಶ್ರೀ ವೀರಭದ್ರಸ್ವಾಮಿ ರಥೋತ್ಸವ

ತುಮಕೂರು: ಇತಿಹಾಸ ಪ್ರಸಿದ್ದ ಹರಳೂರು ಶ್ರೀ ವೀರಭದ್ರಸ್ವಾಮಿ ರಥೋತ್ಸವ ಸಹಸ್ರಾರು ಭಕ್ತಾದಿಗಳ ಸಮ್ಮುಖದಲ್ಲಿ ಅತ್ಯಂತ ವೈಭವಯುತವಾಗಿ ನಡೆಯಿತು. ಚೋಳರ ಕಾಲದದೇವಾಲಯ ಇದಾಗಿದ್ದು. ಐದು ನೂರು ವರ್ಷಗಳ ಇತಿಹಾಸವಿದೆ. ಪ್ರತಿ ವರ್ಷಯುಗಾದಿ ಹಬ್ಬದ ನಂತರದ 15 ದಿನಗಳಿಗೆ ಆರಂಭವಾಗುವ ಶ್ರೀ ವೀರಭದ್ರಸ್ವಾಮಿ ಜಾತ್ರಾ ಮಹೋತ್ಸವ, ಸುಮಾರು ಒಂದು ವಾರಗಳ ನಡೆಯುವುದು ವಾಡಿಕೆ. ರಥೋತ್ಸವದ ಅಂಗವಾಗಿ ಗುರುವಾರ ಬೆಳಗ್ಗೆಯಿಂದಲೇ ರಥ ಹೋಮ, ರಥ ಪ್ರತಿಷ್ಠಾಪನೆ ನಡೆದು, ಮಧ್ಯಾಹ್ನ 1 ಗಂಟೆಯ ವೇಳೆಗೆ ಹರಳೂರು ಗ್ರಾಮಸ್ಥರು ಹಾಗೂ ಭಕ್ತಾದಿಗಳ ಸಮ್ಮುಖದಲ್ಲಿ ಮಹಾ ರಥೋತ್ಸವ ನಡೆಯಿತು.

ಸರ್ವಾಲಂಕೃತನಾದ ಶ್ರೀ ವೀರಭದ್ರಸ್ವಾಮಿಯ ಉತ್ಸವ ಮೂರ್ತಿಯನ್ನು ರಥದಲ್ಲಿ ಕೂರಿಸಿ ಭಕ್ತಾರ



ಹರ್ಷೋದ್ಘಾರದ ನಡುವೆ ರಥವನ್ನು ಎಳೆಯಲಾಯಿತು. ಜಾತ್ರಾ ಮಹೋತ್ಸವದ ಅಂಗವಾಗಿ ರಾತ್ರಿ 7.30ಕ್ಕೆ ಗ್ರಾಮದ ಶ್ರೀ ವೀರಭದ್ರಸ್ವಾಮಿ ಕಲಾವೃಂದದ ಕಲಾವಿದರಿಂದ ಕುರುಕ್ಷೇತ್ರ ಎಂಬ ಪೌರಾಣಿಕ ನಾಟಕದ ಪ್ರದರ್ಶನ ನಡೆಯಿತು.

ರಥೋತ್ಸವದ ನಂತರ ಶ್ರೀ ವೀರಭದ್ರ ಸ್ವಾಮಿಗೆ ಧೂಳೋತ್ಸವ, ಪುಷ್ಪಾಲಂಕಾರ, ಪಾನಕ ಸೇವೆ ನಡೆಯಿತು. ರಾತ್ರಿ 8.30ಕ್ಕೆ ಸಿಂಹ ವಾಹನೋತ್ಸವ, ನವಿಲು ವಾಹನ, ಬೆಳ್ಳಿ ಪಲ್ಲಕ್ಕಿ ಉತ್ಸವ, ನಂದಿ ವಾಹನ ಸೇವೆಗಳು ನೆರವೇರಿಸುವ ಮೂಲಕ ರಥೋತ್ಸವದ ಕಾರ್ಯಕ್ರಮಗಳು ಮುಕ್ತಾಯಗೊಂಡವು.

ರಥೋತ್ಸವದಲ್ಲಿ ಶ್ರೀ ವೀರಭದ್ರಸ್ವಾಮಿ ಸೇವಾ ಸಮಿತಿ, ಶ್ರೀ ವೀರಭದ್ರೇಶ್ವರ ದಾಸೋಹ ಟ್ರಸ್ಟ್ ಹಾಗೂ ಸಮುದಾಯ ಭವನ ನಿರ್ಮಾಣ ಸಮಿತಿಯ ಅಧ್ಯಕ್ಷರು, ಕಾರ್ಯದರ್ಶಿಗಳು ಪದಾಧಿಕಾರಿಗಳು, ನಿರ್ದೇಶಕರುಗಳು, ಭಕ್ತಾದಿಗಳು ಪಾಲ್ಗೊಂಡಿದ್ದರು.

